ಸಂಪುಟ 01 | ಸಂಚಿಕೆ 86 | ಸೋಮವಾರ 23 ಫೆಬ್ರವರಿ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸುಗೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**01) ವಿಶ್ವ ಶಾಂತಿ ಮತ್ತು ತಿಳುವಳಿಕೆ ದಿನ**

ಪ್ರತಿ ವರ್ಷ ಫೆಬ್ರವರಿ 23 ರಂದು, ವಿಶ್ವ ತಿಳುವಳಿಕೆ ಮತ್ತು ಶಾಂತಿ ದಿನವನ್ನು ಆಚರಿಸಲಾಗುತ್ತದೆ. ವಾಸ್ತವವಾಗಿ, ಈ ದಿನವು ರೋಟರಿ ಇಂಟರ್ನ್ಯಾಷನಲ್‌ನ ಉದ್ಘಾಟನಾ ಸಮಾವೇಶವನ್ನು ಸ್ಮರಿಸಲು ಸಹಾಯ ಮಾಡುತ್ತದೆ. ಉದ್ಯಮಿಗಳ ಈ ಸಭೆಯು ಅವರ ಹಿನ್ನೆಲೆಗಳು ಅಪ್ರಸ್ತುತವಾಗುವ ಸ್ಥಳವಾಗಲು ಉದ್ದೇಶಿಸಲಾಗಿತ್ತು, ಇದು ಅಂತಿಮವಾಗಿ ರೋಟರಿ ಇಂಟರ್ನ್ಯಾಷನಲ್ ರಚನೆಗೆ ಕಾರಣವಾದ ಬೆಳವಣಿಗೆಗಳ ಸರಣಿಯನ್ನು ಪ್ರಾರಂಭಿಸಿತು.

**2) ಸಂತ ಗಾಡ್ಗೆ ಬಾಬಾ ಜಯಂತಿ**

19 ನೇ ಶತಮಾನದ ಪ್ರಸಿದ್ಧ ಮರಾಠಿ ಸಮಾಜ ಸುಧಾರಕ ಸಂತ ಗಾಡ್ಗೆ ಮಹಾರಾಜ್ (ಜನನ ದೇಬುಜಿ ಝಿಂಗ್ರಾಜಿ ಜನೋರ್ಕರ್ ಫೆಬ್ರವರಿ 23, 1876) ಅವರ ಜನ್ಮ ವಾರ್ಷಿಕೋತ್ಸವದ ಗೌರವಾರ್ಥವಾಗಿ ಪ್ರತಿ ವರ್ಷ ಫೆಬ್ರವರಿ 23 ರಂದು ಸಂತ ಗಾಡ್ಗೆ ಬಾಬಾ ಜಯಂತಿಯನ್ನು ಆಚರಿಸಲಾಗುತ್ತದೆ. ನೈರ್ಮಲ್ಯ, ಶಿಕ್ಷಣ ಮತ್ತು ಸಾಮಾಜಿಕ ಸಮಾನತೆಯನ್ನು ಉತ್ತೇಜಿಸಲು ಹೆಸರುವಾಸಿಯಾಗಿದ್ದ ಅವರು ಪೊರಕೆಯೊಂದಿಗೆ ಪ್ರಯಾಣಿಸಿದರು, ಸಾಮಾಜಿಕ ದುಷ್ಕೃತ್ಯಗಳು ಮತ್ತು ಕುರುಡುತನದ ವಿರುದ್ಧ ಬೋಧಿಸಿದರು ಮತ್ತು ಸಮುದಾಯ ಸೇವೆಯನ್ನು ಬೆಳೆಸಿದರು.

## ಸುಭಾಷಿತ

ಬದುಕಲ್ಲಿ ಸಿಕ್ಕಿರೋದ್ರಲ್ಲಿ ಖುಷಿ ಪಡೋದನ್ನ ಕಲಿಯಿರಿ
ಹಣ ಸಂಪತ್ತು ಗೌರವ ಜಾಸ್ತಿ ಆದಷ್ಟು ನೆಮ್ಮದಿ
ಕಡಿಮೆಯಾಗುವುದು

– ಶ್ರೀ ಸಿದ್ದೇಶ್ವರ ಶ್ರೀ

# ಬಜೆಟ್‌ನಲ್ಲಿ ಕಾರವಾರಕ್ಕೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಮಂಜೂರು:ಸಿಎಂ ಸಿದ್ದರಾಮಯ್ಯ

❑ ನೈಜ್ಯ ದೆಸೆ ನ್ಯೂಸ್

ಕಾರವಾರ: ಮುಂದಿನ ಆಯ-ವ್ಯಯದಲ್ಲಿ ಕಾರವಾರಕ್ಕೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಮಂಜೂರು ಮಾಡುತ್ತೇನೆ. ಇದರಿಂದ ಇಲ್ಲಿನ ಜನರು ಉನ್ನತ ಚಿಕಿತ್ಸೆಗಾಗಿ ಉಡುಪಿ, ಮಂಗಳೂರು, ಹುಬ್ಬಳ್ಳಿಗೆ ಹೋಗುವ ಅಲೆದಾಟ ತಪ್ಪಿಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದರು. ಕಾರವಾರದಲ್ಲಿ 450 ಹಾಸಿಗೆಗಳ ಜಿಲ್ಲಾ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಉದ್ಘಾಟಿಸಿ ಮಾತನಾಡಿ, ಬಡವರು ಸರ್ಕಾರಿ ಆಸ್ಪತ್ರೆಗಳನ್ನು ನಂಬಿದ್ದಾರೆ. ಶ್ರೀಮಂತರು ದೊಡ್ಡ ಆಸ್ಪತ್ರೆಗೆ ಹೋಗುತ್ತಾರೆ. ಜಿಲ್ಲಾ ಮಲ್ಟಿ ಸ್ಪೆಷಾಲಿಟಿ ಮೆಡಿಕಲ್ ಕಾಲೇಜಿನ ಕಟ್ಟಡಕ್ಕೆ 200 ಕೋಟಿ ರೂ. ವೆಚ್ಚವಾಗಿದೆ. 2016ರಲ್ಲಿ ನಾನೇ ಮೆಡಿಕಲ್ ಕಾಲೇಜಿಗೆ ಅಡಿಗಲ್ಲು ಹಾಕಿದ್ದೆ. ಅದು ಈಗ ಕಾರ್ಯ ನಿರ್ವಹಿಸುತ್ತಿದೆ. ಪ್ರತಿ ಜಿಲ್ಲೆಯಲ್ಲಿಯೂ ಬಡವರಿಗಾಗಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳು ಸ್ಥಾಪಿಸುವ ಗುರಿಯನ್ನು ಸರ್ಕಾರ ಹೊಂದಿದೆ ಎಂದು ಹೇಳಿದರು.ಕ್ಯಾನ್ಸರ್ ಯೂನಿಟ್ ಸ್ಥಾಪನೆ:ಜಿಲ್ಲಾ ಕೇಂದ್ರಗಳಲ್ಲಿ ಎಲ್ಲಾ ವೈದ್ಯಕೀಯ ವ್ಯವಸ್ಥೆಗಳ ಒದಗಿಸುವುದು ನಮ್ಮ ಸರ್ಕಾರದ ಆದ್ಯತೆಯಾಗಿದೆ. ಕರ್ನಾಟಕದಲ್ಲಿ



ಈಗಾಗಲೇ 22 ಸರ್ಕಾರಿ ಮೆಡಿಕಲ್ ಕಾಲೇಜಿದ್ದು, ಮುಂದಿನ ದಿನಗಳಲ್ಲಿ ಕೋಲಾರ, ಪುತ್ತೂರು, ವಿಜಯಪುರಗಳಲ್ಲಿ ಕಾಲೇಜು ನಿರ್ಮಿಸಲಾಗುವುದು. ಕ್ಯಾನ್ಸರ್ ಯೂನಿಟ್ ಒಂದನ್ನು ಕಾರವಾರದಲ್ಲಿ ಸ್ಥಾಪಿಸಲಾಗುವುದು ಎಂದರು.ಸರ್ಕಾರದಲ್ಲಿ ಹಣ ಇದ್ದ ಕಾರಣ ಕಾರವಾರದಲ್ಲಿ ಆಸ್ಪತ್ರೆ ಕಟ್ಟಡ, ಗಂಗಾವಳಿ ಸೇತುವೆ ಉದ್ಘಾಟನೆ ಆಗಿದೆ. ಗ್ಯಾರಂಟಿಗಳಿಂದ ಸರ್ಕಾರದ ಬಳಿ ಹಣವಿಲ್ಲ ಎಂದು ವಿರೋಧ ಪಕ್ಷದವರು ಟೀಕಿಸುತ್ತಿದ್ದಾರೆ. ಆದರೆ ನಮ್ಮ ಅಭಿವೃದ್ಧಿಯ ಪಯಣ ನಿರಂತರವಾಗಿ ಸಾಗಿದೆ. ಉತ್ತರ ಕನ್ನಡ ಜಿಲ್ಲೆಗೆ 2,954 ಕೋಟಿ ರೂ.ಗಳ ಇಲ್ಲಿವರೆಗೆ ಗ್ಯಾರಂಟಿ ಯೋಜನೆಗಳಿಗೆ ವ್ಯಯಿಸಲಾಗಿದೆ. ರಾಜ್ಯದಲ್ಲಿ ಸುಮಾರು 1,18,000 ಕೋಟಿ ರೂ.ಗಳನ್ನು ಗ್ಯಾರಂಟಿ ಯೋಜನೆಗಳಿಗೆ ಖರ್ಚು ಮಾಡಲಾಗಿದೆ. ಬಿಜೆಪಿಯವರು ನಮ್ಮ ಜನಪರ ಯೋಜನೆಗಳ ಟೀಕಿಸುತ್ತಾ, ಅಭಿವೃದ್ಧಿಯಾಗುತ್ತಿಲ್ಲವೆಂದು ದೂರುತ್ತಿದ್ದಾರೆ. ಬಿಜೆಪಿಯವರು ತಮ್ಮ ಅವಧಿಯಲ್ಲಿ ಇಲ್ಲಿನ ಸೇತುವೆ ಯೋಜನೆಗಳನ್ನು ಪೂರ್ಣಗೊಳಿಸಲಿಲ್ಲ. ನಮ್ಮ ಸರ್ಕಾರ ಉಳುಗಾ ಕೆರವಡಿ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ಸೇತುವೆ ಯೋಜನೆಯ ಆದ್ಯತೆ ಮೇಲೆ ಪೂರ್ಣಗೊಳಿಸುತ್ತದೆ ಎಂದು ಭರವಸೆ ನೀಡಿದರು. ರಾಜ್ಯದಲ್ಲೇ ಹೆಚ್ಚು ಮೆಡಿಕಲ್ ಕಾಲೇಜು:ಡಿಸಿಎಂ ಡಿ.ಕೆ. ಶಿವಕುಮಾರ್ ಮಾತನಾಡಿ, ಕಾರವಾರದಿಂದ ರಾಜ್ಯಕ್ಕೆ ದೊಡ್ಡ ಶಕ್ತಿ ನೀಡಿದ್ದೀರಿ. ಮಾಡಿದ ಕೆಲಸ ಸಾಕ್ಷಿಯಾಗಲಿವೆ. ಕಟ್ಟಡದಷ್ಟೇ ನಂಬಿಕೆ ಮುಖ್ಯ. 36 ವರ್ಷದಿಂದ ರಾಜಕೀಯದಲ್ಲಿದ್ದೇನೆ. ಶರಣಪ್ರಕಾಶ್ ಪಾಟೀಲ್ ವೈದ್ಯಕೀಯ ಸಚಿವರಾಗಿ ಒಳ್ಳೆಯ ಕೆಲಸ ಮಾಡಿದ್ದಾರೆ. ಇದಕ್ಕೆ ಸಿಎಂ ಸಿದ್ದರಾಮಯ್ಯ ಸಹ ಕಾರಣ. 13 ಸಾವಿರಕ್ಕೂ ಹೆಚ್ಚು ಯುವಕ-ಯುವತಿಯರು ಮೆಡಿಕಲ್ ಓದುತ್ತಿದ್ದಾರೆ. ದೇಶದ ಯಾವ ರಾಜ್ಯದಲ್ಲೂ ಇಲ್ಲದಷ್ಟು ಮೆಡಿಕಲ್ ಕಾಲೇಜುಗಳು ಕರ್ನಾಟಕದಲ್ಲಿವೆ. ನಾವು ದೇಶದ, ಹೊರ ದೇಶದ ಆರೋಗ್ಯ ರಾಯಭಾರಿಗಳು ಎಂದರು.ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ, ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ್ ಪಾಟೀಲ್, ಶಾಸಕರಾದ ಆರ್.ವಿ.ದೇಶಪಾಂಡೆ, ಸತೀಶ್ ಸೈಲ್ ಇತರರಿದ್ದರು.

## ಪ್ರಧಾನಮಂತ್ರಿ ಶ್ರಮಯೋಗಿ ಮಾನ್-ಧನ್ ಯೋಜನೆಯ ವಿಶೇಷ ನೋಂದಣಿ ಅಭಿಯಾನ

❑ ನೈಜ್ಯ ದೆಸೆ ನ್ಯೂಸ್

ರಾಯಚೂರು (ಕರ್ನಾಟಕ ವಾರ್ತೆ): ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್-ಧನ್ ಯೋಜನೆ ಹಾಗೂ ವ್ಯಾಪಾರಿಗಳು ಮತ್ತು ಸ್ವಯಂ ಉದ್ಯೋಗಿ ವ್ಯಕ್ತಿಗಳಿಗೆ ರಾಷ್ಟ್ರೀಯ ಪಿಂಚಣಿ ಯೋಜನೆ (ಎನ್‌ಪಿಎಸ್-ವ್ಯಾಪಾರಿಗಳು) ಯೋಜನೆಗಳಡಿ ಅಸಂಘಟಿತ ವಲಯದ ಕಾರ್ಮಿಕರನ್ನು, ವ್ಯಾಪಾ-ರಿಗಳು ಹಾಗೂ ಸ್ವಯಂ ಉದ್ಯೋಗಿಗಳನ್ನು ನೊಂದಾಯಿಸಲು ದಿನಾಂಕ: 15-01-2026 ರಿಂದ 15-03-2026ರವರೆಗೆ ವಿಶೇಷ ನೋಂದಣಿ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. 18 ರಿಂದ 40 ವರ್ಷದೊಳಗಿನ ಅಸಂಘಟಿತ ಕಾರ್ಮಿಕರು ಈ ಯೋಜನೆಯಡಿ ನೋಂದಾಯಿಸಬಹುದಾಗಿದೆ. ವಯಸ್ಸಿಗೆ ಅನುಗುಣವಾಗಿ ಮಾಸಿಕವಾಗಿ 55 ರೂ. ರಿಂದ 200ರೂ.ವರೆಗೆ ವಂತಿ-ಕೆ ಪಾವತಿ ಮಾಡಬೇಕಾಗುತ್ತದೆ. ಕೇಂದ್ರ ಸರ್ಕಾರದ ವತಿಯಿಂದ ಅಷ್ಟೇ ವಂತಿಕೆ ಪಾವತಿಸಿ ಬ್ಯಾಂಕ್ ಖಾತೆಯಲ್ಲಿ ಈ ಮೊತ್ತವನ್ನು ಸಂಗ್ರಹಿಸಲಾಗುತ್ತದೆ. 60 ವರ್ಷ ಪೂರ್ಣಗೊಂಡ ನಂತರ ಮಾಸಿಕ 3000ರೂ. ಪಿಂಚಣಿ ಸೌಲಭ್ಯ ಪಡೆಯಬಹುದಾಗಿದೆ.ಈ ಯೋಜನೆಯಡಿ ನರೇಗಾಕಾರ್ಮಿಕರು, ಎಸ್‌ಹೆಚ್‌ಜಿ ಸದಸ್ಯರು, ಕೃಷಿ ಕಾರ್ಮಿಕರು, ಅಂಗನವಾಡಿ ಕಾರ್ಮಿಕರು, ಮಧ್ಯಾಹ್ನದ ಬಿಸಿ ಊಟದ ಕಾರ್ಮಿಕರು, ಆಶಾ ಕಾರ್ಯಕರ್ತೆಯರು, ಬೀದಿ ಬದಿ ವ್ಯಾಪಾರಿಗಳು, ಗೃಹ ಕಾರ್ಮಿಕರು, ಮೀನುಗಾರರು, ಇನ್ನಿತರೆ ಅಸಂಘಟಿತ ವಲಯಗಳ ಕಾರ್ಮಿಕರು ಹಾಗೂ ವ್ಯಾಪಾರಿಗಳು ತಮ್ಮ ಆಧಾರ್ ಕಾರ್ಡ್, ಬ್ಯಾಂಕ್ ಪಾಸ್‌ಬುಕ್ ಹಾಗೂ ಮೊದಲ ತಿಂಗಳ ವಂತಿಕೆಯೊಂದಿಗೆ ಸಮೀಪದ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ನೋಂದಣಿಯಾಗಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಕಾರ್ಮಿಕ ಇಲಾಖೆಯ ಕಚೇರಿಗಳು, ಎಲ್.ಐ.ಸಿ.ಯ ಶಾಖಾ ಕಚೇರಿಗಳು, ಇಪಿಎಫ್‌ಒ ಮತ್ತು ಇಎಸ್‌ಐಸಿ ಕಚೇರಿ ಹಾಗೂ ಕಾರ್ಮಿಕ ಸಹಾಯವಾಣಿ 155214, ಟೋಲ್ ಫ್ರಿಕಾಲ್ 1800-267-6888ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




# ಕಣ್ಣಿನ ಆರೈಕೆಯ ನಿರಂತರ ವೈದ್ಯಕೀಯ ಆರೋಗ್ಯ ಶಿಕ್ಷಣ ಕಾರ್ಯಕ್ರಮದಡಿ ಜಾಗೃತಿ.


❑ ನೈಜ್ಯ ದೆಸೆ ನ್ಯೂಸ್

ಜೀವನವದ ಬಹುಮುಖ್ಯ ಅಂಗ ಕಣ್ಣುಗಳ ಆರೈಕೆಗೆ ಮಹತ್ವ ನೀಡುವ ಕಾರ್ಯ ನಾವೆಲ್ಲರೂ ಮಾಡೋಣ: ಡಾ ಸುರೇಂದ್ರ ಬಾಬು ಪ್ರತಿ ವ್ಯಕ್ತಿಯ ಜೀವನದಲ್ಲಿ ಕಣ್ಣುಗಳು ಕೇವಲ ದೇಹದ ಅಂಗ ಮಾತ್ರ ಅಲ್ಲ, ವ್ಯಕ್ತಿಯ ಸಾಧನೆ, ಕುಟುಂಬದ ನಿರ್ವಹಣೆ ಸೇರಿದಂತೆ ಜೀವನಪೂರ್ತಿ ಪ್ರತಿ ಹಂತದಲ್ಲೂ ತನ್ನದೆ ಮಹತ್ವ ಸಾರುವ ಕಣ್ಣುಗಳು ಆರೈಕೆಗೆ ಜಿಲ್ಲೆಯಲ್ಲಿ ಸರಕಾರದೊಂದಿಗೆ ನವೋದಯ ವೈದ್ಯಕೀಯ ಮಹಾವಿದ್ಯಾಲಯ ನೀಡುತ್ತಿರುವ ಸಹಕಾರ ನಿರಂತರವಾಗಿರಲಿ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ ಸುರೇಂದ್ರಬಾಬು ತಿಳಿಸಿದರು.ನವೋದಯ ವೈದ್ಯಕೀಯ ಮಹಾವಿದ್ಯಾಲಯವು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನವೋದಯ ಕಾಲೇಜಿನ ಎಸ್ ಆರ್ ಹೆಗಡೆ ಸಿಲ್ವರ್ ಜ್ಯುಬಿಲಿ ಸಭಾಂಗಣದಲ್ಲಿ ನಿರಂತರ ವೈದ್ಯಕೀಯ ಆರೋಗ್ಯ ಶಿಕ್ಷಣ ಕಾರ್ಯಕ್ರಮದಡಿ ' ಸಮುದಾಯದಲ್ಲಿ ಕಣ್ಣುಗಳ ಆರೈಕೆಯಲ್ಲಿ ಡಿಬಿಸಿಎಸ್ ಪಾತ್ರ" ಎಂಬ ವಿಷಯದಡಿ ಹಮ್ಮಿಕೊಂಡ ಜಾಗೃತಿ ಕಾರ್ಯಾಗಾರದಲ್ಲಿ ಮಾತನಾಡುತ್ತಾ, ಅಂಧತ್ವವನ್ನು ತಡೆಗಟ್ಟಲು ಆರೋಗ್ಯ ಇಲಾಖೆ ಕ್ಷೇತ್ರ ಮಟ್ಟದಲ್ಲಿ ತಪಾಸಣೆ, ಕನ್ನಡಕ ವಿತರಣೆ, ಉಚಿತ ನೇತ್ರ ಶಸ್ತ್ರಚಿಕಿತ್ಸ ಶಿಬಿರಗಳನ್ನು ಏರ್ಪಡಿಸುತ್ತಿದ್ದು, ಇತ್ತಿಚೆಗೆ




ಕರ್ನಾಟಕ ಸರಕಾರವು ಸಮುದಾಯ ಆರೋಗ್ಯ ಕೇಂದ್ರ, ಸಾರ್ವಜನಿಕ ಆಸ್ಪತ್ರೆ, ಜಿಲ್ಲಾ ಆಸ್ಪತ್ರೆಗಳಲ್ಲಿ ಸುಸಜ್ಜಿತ ಆಶಾಕಿರಣ ದೃಷ್ಟಿಕೇಂದ್ರಗಳನ್ನು ಆರಂಭಿಸಿದ್ದು, ಈ ದಿಶೆಯಲ್ಲಿ ಕಣ್ಣಿನ ಆರೈಕೆ ಮತ್ತು ಅಂಧತ್ವ ತಡೆಗಟ್ಟುವಿಕೆಯ ಬಗ್ಗೆ ಸಮುದಾಯ ಜಾಗೃತಿ ಅವಶ್ಯವಾಗಿದ್ದು, ನವೋದಯ ವೈದ್ಯಕೀಯ ಮಹಾವಿದ್ಯಾಲಯವು 2003 ರಿಂದ ಡಿಬಿಸಿಎಸ್ ಅನ್ನು ಅನುಷ್ಠಾನಗೊಳಿಸಿದ್ದು ನೇತ್ರ ಸುರಕ್ಷತೆಗೆ ಅವರ ಸಾಮಾಜಿಕ ಕಳಕಳಿಗೆ ಸಾಕ್ಷಿಯಾಗಿದೆ ಎಂದರು. ಕಾರ್ಯಕ್ರಮ ಉದ್ಘಾಟಿಸಿದ ನವೋದಯ ಶೈಕ್ಷಣಿಕ ಟ್ರಸ್ಟ್ ರಜಿಸ್ಟರರ್ ಡಾ ಶ್ರೀನಿವಾಸ್ ಟಿ, ಮಾತನಾಡಿ, ಕರ್ನಾಟಕ ಸರಕಾರದ ಮಾರ್ಗಸೂಚಿಯಡಿ ಆರೋಗ್ಯ ಇಲಾಖೆಯ ಜಿಲ್ಲಾ ಅಂಧತ್ವ ನಿಯಂತ್ರಣ ಸಂಘದೊಂದಿಗೆ ನಿರಂತರ ಸಮನ್ವಯ ಕೈಗೊಂಡು, ಬಡವರು ಮತ್ತು ನಿರ್ಗತಿಕರಿಗೆ ಉಚಿತ ಕಣ್ಣಿನ ಆರೈಕೆಗಾಗಿ 2003 ರಿಂದ ಡಿಬಿಸಿಎಸ್ ಅಡಿಯಲ್ಲಿ 25000 ಕ್ಕೂ ಹೆಚ್ಚು ನೇತ್ರಪೊರೆ ಶಸ್ತ್ರಚಿಕಿತ್ಸೆಯನ್ನು ಕೈಗೊಳ್ಳಲಾಗಿದೆ, 2011 ರಿಂದ 100 ಕ್ಕೂ ಹೆಚ್ಚು ನೇತ್ರಗಳನ್ನು ದಾನಿಗಳಿಂದ ಸಂಗ್ರಹಿಸಿದ್ದು, 100 ಕ್ಕೂ ಹೆಚ್ಚು ಜನ ಅಂಧತ್ವ ಸಮಸ್ಯೆಯುಳ್ಳವರು ಇದರ ಪ್ರಯೋಜನ ಪಡೆದಿದ್ದು, ಇದಕ್ಕಾಗಿ ಕಣ್ಣಿನ ಸಮಸ್ಯೆಗಳಾದ, ದೃಷ್ಟಿದೊಷ, ಗ್ಲುಕೋಮಾ, ಡಯಾಬಿಟಿಕ್ ರೆಟಿನೋಪತಿ, ಮುಂತಾದವುಗಳಿಗೆ ಚಿಕಿತ್ಸೆಯನ್ನು ಎನ್‌ಎಮ್‌ಸಿಹೆಚ್ ಮತ್ತು ಆರ್‌ಸಿಯ ನೇತ್ರವಿಜ್ಞಾನ ವಿಭಾಗವು ಮುಂದುವರೆಸಿದ್ದು, ಇನ್ನು ಹೆಚ್ಚಿನ ಕಾರ್ಯಕ್ರಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಹಾಗೂ ಜಿಲ್ಲಾ ಅಂಧತ್ವ ನಿಯಂತ್ರಣಾಧಿಕಾರಿ, ಡಾ ನಂದಿತಾ ಎಮ್-ಎನ್,ನವೋದಯ ವೈದ್ಯಕೀಯ ಕಾಲೇಜು ನಿವೃತ್ತ ಪ್ರಾಧ್ಯಾಪಕಿ ಡಾ. ಗೀತಾಮಣಿ, ಲಾತೂರ್‌ನ ಎಂಐಎಂಎಸ್‌ಆರ್ ವೈದ್ಯಕೀಯ ಕಾಲೇಜಿನ ಸಮುದಾಯ ಔಷಧ ಪ್ರಾಧ್ಯಾಪಕ ಡಾ. ಅನಂತ್ ಟಕಲ್ಕರ್ ಉಪನ್ಯಾಸ ನೀಡಿದರು. ವೇದಿಕೆಯಲ್ಲಿ ನವೋದಯ ವೈದ್ಯಕೀಯ ಕಾಲೇಜು ಆಡಳಿತ ಮಂಡಳಿಯ ನಿರ್ದೇಶಕರು ಡಾ ಅಮೃತ ರೆಡ್ಡಿ, ನೇತ್ರವಿಜ್ಞಾನ ವಿಭಾಗದ ಮುಖ್ಯಸ್ಥೆ ಡಾ ಅನುಪಮಾ ತಕ್ಳಿಕರ್, ಕೆಎಂಸಿ ವೀಕ್ಷಕ ಇಎನ್‌ಟಿ ಶಸ್ತ್ರಚಿಕಿತ್ಸಕ ಡಾ ವಾಸುದೇವ್ ಜಹಗೀದಾರ್,ವೈದ್ಯಕೀಯ ಅಧಿಕ್ಷಕರು ಡಾ ಅರುಣ್ ಕೆ ಎನ್, ಪ್ರಭಾರಿ ಪ್ರಾಂಶುಪಾಲರು ಡಾ ವಿಶಾಲ್ ಸಾಳ್ವೆ, ವೇದಿಕೆ ಮೇಲಿದ್ದರು. ಕಾರ್ಯಕ್ರಮದಲ್ಲಿ ಆರ್‌ಎಂಒ ಡಾ ನಾರಾಯಣ ಪೆಂಡ್ಲಿಕಲ್, ನೇತ್ರವಿಜ್ಞಾನ ವಿಭಾಗದ ಪ್ರಾಧ್ಯಾಪಕಿ ಡಾ. ಶರಣಬಸಮ್ಮ, ಡಾ ರೇಷ್ಮಾ,ಕಾರ್ಯಕ್ರಮದ ಸಂಘಟನಾ ಕಾರ್ಯದರ್ಶಿ ಡಾ ಲವನ್ ಕುಮಾರ್, ಸಹಾಯಕ ಪ್ರಾಧ್ಯಾಪಕರಾದ ಡಾ ಕಾಂಚನಾ ಬಿ ಕೆ, ಡಾ ವೈಭವ, ಡಾ ಶ್ವೇತಾ ಜಿ, ಡಾ ಅಪೂರ್ವ ಡಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಗುರು ಗಂಪಾ, ಮತ್ತು ವಿವಿಧ ವಿಭಾಗಗಳ ಮುಖ್ಯಸ್ಥರು ಇತರ ಗಣ್ಯರು ಉಪಸ್ಥಿತರಿದ್ದರು.

# ಫೆ.24 ರಂದು ಭೋವಿ ಅಭಿವೃದ್ಧಿ ನಿಗಮದ ಪ್ರಗತಿ ಪರಿಶೀಲನಾ ಸಭೆ




❑ ನೈಜ್ಯ ದೆಸೆ ನ್ಯೂಸ್

ರಾಯಚೂರು (ಕರ್ನಾಟಕ ವಾರ್ತೆ): ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ರಾಮಪ್ಪ ಅವರ ಅಧ್ಯಕ್ಷತೆಯಲ್ಲಿ ಫೆ.24ರ ಬೆಳಿಗ್ಗೆ 11 ಗಂಟೆಗೆ ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಧಿಕಾರಿಗಳ ಸಮನ್ವಯದೊಂದಿಗೆ ನಿಗಮದ ಯೋಜನೆಗಳ ಕುರಿತು ಪ್ರಗತಿ ಪರಿಶೀಲನಾ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಭೋವಿ ಸಮಾಜದ ಎಲ್ಲಾ ಮುಖಂಡರು ಮತ್ತು ಸಾರ್ವಜನಿಕರು ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕರ್ನಾಟಕ ಬೋವಿ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.ಅಂದು ಸಭೆಗೂ ಮುನ್ನು ಬೆಳಿಗ್ಗೆ 10.30 ಗಂಟೆಗೆ ಪಕ್ಷದ ಕಚೇರಿಗೆ ಭೇಟಿ ನೀಡಲಿದ್ದಾರೆ. ನಂತರ ಭೋವಿ ಸಮುದಾಯದ ಮುಖಂಡರುಗಳೊಂದಿಗೆ ಸಭೆಯನ್ನು ಏರ್ಪಡಿಸಲಾಗಿದೆ.ಸಂಜೆ 4 ಗಂಟೆಗೆ ರಾಮನಗರ ಕ್ಯಾಂಪ್ ಹಾಗೂ ಪಂಚಮುಖಿ ಗಾಣದಾಳ ಗ್ರಾಮದಲ್ಲಿನ ಭೋವಿ ಕಾಲೋನಿಗಳಲ್ಲಿ ಭೇಟಿ ನೀಡಿ ಸಮಾಜದ ಕುಂದುಕೊರತೆಗಳ ಹಾಗೂ ನಿಗಮದ ಸೌಲಭ್ಯಗಳ ಬಗ್ಗೆ ಜನರೊಂದಿಗೆ ಸಂವಾದ ನಡೆಸಲಿದ್ದಾರೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಪಿಯು ಪರೀಕ್ಷೆಯು ವ್ಯವಸ್ಥಿತ, ಪಾರದರ್ಶಕವಾಗಿ ನಡೆಯಲಿ: ಅಪರ ಜಿಲ್ಲಾಧಿಕಾರಿ ಶಿವಾನಂದ

❑ ನೈಜ್ಯ ದೆಸೆ ನ್ಯೂಸ್

ರಾಯಚೂರು (ಕರ್ನಾಟಕ ವಾರ್ತೆ): ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳು ಫೆ.28 ರಿಂದ ಆರಂಭವಾಗಿ ಮಾರ್ಚ 17ರವರೆಗೆ ನಡೆಯಲಿದ್ದು, ಪರೀಕ್ಷೆಯನ್ನು ವ್ಯವಸ್ಥಿತವಾಗಿ ಹಾಗೂ ಪಾರದರ್ಶಕವಾಗಿ ನಡೆಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.ಫೆ.21ರ ಶನಿವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇ-ರಿಯ ಸಭಾಂಗಣದಲ್ಲಿ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ ಸಿದ್ಧತೆ ಕುರಿತು ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳನ್ನು ಯಾವುದೇ ರೀತಿಯ ಗೊಂದಲಕ್ಕೆ ಅವಕಾಶವಿರದಂತೆ, ಸುಗಮ ಹಾಗೂ ಸುವ್ಯವಸ್ಥಿತವಾಗಿ ನಡೆಸಬೇಕು. ಪರೀಕ್ಷೆಗೆ ಮೇಲ್ವಿಚಾರಕರ ನಿಯೋಜನೆ, ಪೊಲೀಸರು ಹಾಗೂ ಆರೋಗ್ಯ ಸಿಬ್ಬಂದಿ ನಿಯೋಜನೆ ಸೇರಿದಂತೆ ಪಿಯು




ಪರೀಕ್ಷಾ ಪ್ರಾಧಿಕಾರದ ನಿರ್ದೇಶನವನ್ನು ಚಾಚೂ ತಪ್ಪದೆ ಪಾಲಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚಿಸಿದರು.ಪರೀಕ್ಷಾ ಕೊಠಡಿಗಳಲ್ಲಿ ಸಿಸಿಟಿವಿ ಅಳವಡಿಸುವುದು ಸೇರಿದಂತೆ ಪರೀಕ್ಷಾ ಪಾವಿತಠಯತೆಯನ್ನು ಕಾಪಾಡಬೇಕು. ಪರೀಕ್ಷಾ ಕೇಂದ್ರಗಳ ಚಲನವಲನಕ್ಕೆ ಸಂಬಂಧಿಸಿದಂತೆ ವೆಬ್‌ಕಾಸ್ಟಿಂಗ್ ವ್ಯವಸ್ಥೆ ಮಾಡಬೇಕು. ವಿದ್ಯಾರ್ಥಿಗಳು ನೋಂದಣಿ ಸಂಖ್ಯೆ ಹಾಗೂ ಕೊಠಡಿ ಸಂಖ್ಯೆ ಖಾತರಿ ಪಡಿಸಿಕೊಳ್ಳಲು ಪರೀಕ್ಷಾ ಕೇಂದ್ರದಲ್ಲಿ ಮಾಹಿತಿ ಒದಗಿಸುವಂತಾಗಬೇಕು ಎಂದರು.ಪರೀಕ್ಷಾ ದಿನಗಳಲ್ಲಿ ಅಗತ್ಯ ವಾಹನ ನಿಯೋಜಿಸುವುದು ಜೊತೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾದಂತೆ ನೋಡಿಕೊಳ್ಳುವುದು, ಆರೋಗ್ಯ ಇಲಾಖೆಯಿಂದ ಶುಶ್ರೂಷಕರನ್ನು ನೇಮಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.ಈ ವೇಳೆ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಅವರು ಮಾತನಾಡಿ, ಪರೀಕ್ಷಾ ದಿನದಂದು ಪರೀಕ್ಷಾ ಕೇಂದ್ರದ ಸುತ್ತಲಿನ 200 ಮೀಟರ್ ವ್ಯಾಪ್ತಿಯಲ್ಲಿ ಪ್ರತಿಬಂಧಕ ಜಾರಿಗೊಳಿಸಲಾಗುತ್ತದೆ. ಹಾಗೆಯೇ ಪರೀಕ್ಷಾ ದಿನಗಳಂದು ಜೆರಾಕ್ಸ್ ಅಂಗಡಿಗಳನ್ನು ಸಹ ಮುಚ್ಚಿಸಲಾಗುತ್ತದೆ ಎಂದರು.ಈ ವೇಳೆ ಪದವಿ ಪೂರ್ವ ಕಾಲೇಜು ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸೋಮಶೇಖರಪ್ಪ ಹೋಕ್ರಾಣಿ ಅವರು ಮಾತನಾಡಿ, ಜಿಲ್ಲೆಯಲ್ಲಿ ಈ ಬಾರಿ 22,442 ವಿದ್ಯಾರ್ಥಿಗಳು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ ಬರೆಯಲಿದ್ದು, ಮೊದಲ ಬಾರಿಗೆ 18,419 ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದಾರೆ. 560 ಖಾಸಗಿಯಾಗಿ ಹಾಗೂ 3,450 ಪುನರಾವರ್ತಿತ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದು, ಜಿಲ್ಲೆಯ 43 ಕೇಂದ್ರಗಳಲ್ಲಿ ದ್ವಿತೀಯ ಪಿಯು ಪರೀಕ್ಷೆ ನಡೆಯಲಿದೆ ಎಂದರು.ಪರೀಕ್ಷೆ ಕೇಂದ್ರಗಳು: ರಾಯಚೂರು ತಾಲೂಕಿನಲ್ಲಿ 13, ಲಿಂಗಸುಗೂರು 07, ದೇವದುರ್ಗ 05, ಸಿಂಧನೂರು 09, ಮಾನವಿ 05, ಮಸ್ಕಿ 02, ಸಿರವಾರ 02 ಸೇರಿದಂತೆ ಒಟ್ಟು 43 ಪರೀಕ್ಷೆ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. ಇದೇ ಸಂದರ್ಭದಲ್ಲಿ ಜಿಲ್ಲೆಯ ವಿವಿಧ ತಾಲೂಕಿನ ತಹಶಿಲ್ದಾರರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ವಿವಿಧ ಕಾಲೇಜಿನ ಪ್ರಾಂಶುಪಾಲರು, ಹಿರಿಯ ಉಪನ್ಯಾಸಕರು ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ವಿವಿಧ ಅಧಿಕಾರಿಗಳು, ಸಿಬ್ಬಂದಿ ಸಭೆಯಲ್ಲಿ ಇದ್ದರು.



## ಸಾಹಿತ್ಯ ಸಿಂಚನ

ಯುವಜನತೆ

ಯುವಕರಲ್ಲಿ ಇದೆ ಶಕ್ತಿ ಅಪಾರ,
ಕನಸುಗಳಲ್ಲಿ ಉಕ್ಕುವ ಜ್ವಾಲೆ.
ಧೈರ್ಯವಿದ್ದರೆ ಸಾಧ್ಯವೆಲ್ಲ,
ಮುಂದೆ ಸಾಗು ಎಂದೆಂದೂ ಬಾಳೆ.

ಶ್ರಮವೇ ನಮ್ಮ ಯಶಸ್ಸಿನ ಮಂತ್ರ,
ಸಾಧನೆ ನಮ್ಮ ಗುರಿ ಆಗಲಿ.
ದೇಶದ ಭವಿಷ್ಯ ನಮ್ಮ ಕೈಯಲ್ಲಿ,
ಜ್ಞಾನ ದೀಪ ಸದಾ ಬೆಳಗಲಿ.

ಸೋಲು ಬಂದರೂ ಹೆದರದೆ ನಿಲ್ಲು,
ಅದು ಗೆಲುವಿನ ಮೊದಲ ಹೆಜ್ಜೆ.
ನಂಬಿಕೆ ಇದ್ದರೆ ಅಸಾಧ್ಯವಿಲ್ಲ,
ಮನದೊಳಗೊಂದು ಹೊಸ ಬೆಳಗೆ.

ಏಕತೆ ನಮ್ಮ ಬಲವಾಗಲಿ,
ಸತ್ಯನಿಷ್ಠೆ ನಮ್ಮ ಆಭರಣ.
ಯುವಜನತೆ ಎದ್ದೇಳಿದರೆ,
ಭಾರತದ ಭವಿಷ್ಯ ಸುವರ್ಣ

–ರಮೇಶ ಕೆ




# ಕಾರುಣ್ಯಾಶ್ರಮದಲ್ಲಿ ಶಾಸಕ ಬಸನಗೌಡ ಬಾದರ್ಲಿ ಅವರ ಜನ್ಮದಿನ ಸಮಾರಂಭ

❑ ನೈಜ್ಯ ದೆಸೆ ನ್ಯೂಸ್



ನಮ್ಮ ಬಸನಗೌಡ ಬಾದರ್ಲಿ ಅಪರೂಪದ ರಾಜಕಾರಣಿಯಾಗಿ ನಮ್ಮೆಲ್ಲರಿಗೆ ಸ್ಫೂರ್ತಿಯಾಗಿದ್ದಾರೆ, ನಮ್ಮ ಬಸನಗೌಡ ಬಾದರ್ಲಿ ಅವರ ರಾಜಕಾರಣ ಸಿಂಧನೂರಿನಲ್ಲಿ ಇತಿಹಾಸ ಸೃಷ್ಟಿಸಿದೆ – ಅಮರೇಶ ಗಿರಿಜಾಲಿ ಸಿಂಧನೂರು – ಫೆ 22 ಕರ್ನಾಟಕ ಪ್ರದೇಶ ಬ್ಲಾಕ್ ಕಾಂಗ್ರೆಸ್ ಸಮಿತಿ ಎಸ್. ಸಿ. ಘಟಕ ಯುವ ಕಾಂಗ್ರೆಸ್ ಸಮಿತಿ ಸಿಂಧನೂರು ಹಾಗೂ ಬಸನಗೌಡ ಬಾದರ್ಲಿ ಅಭಿಮಾನಿ ಬಳಗ ಸಿಂಧನೂರು ಇವರುಗಳ ವತಿಯಿಂದ ಕರ್ನಾಟಕ ವಿಧಾನ ಪರಿಷತ್ ಶಾಸಕರಾದ ಬಸನಗೌಡ ಬಾದರ್ಲಿ ಅವರ 43ನೇ ವರ್ಷದ ಜನ್ಮದಿನ ಸಮಾರಂಭ ಕಾರ್ಯಕ್ರಮವನ್ನು ನಗರದ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ)ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಆಶ್ರಯದಾತರುಗಳಿಗೆ ಅನ್ನ ಸಂತರ್ಪಣೆ ಹಾಗೂ ಹಣ್ಣು ಹಂಪಲುಗಳನ್ನು ವಿತರಿಸುವ ಮೂಲಕ ಅರ್ಥಪೂರ್ಣವಾಗಿ ನೆರವೇರಿತು. ಈ ಕಾರ್ಯಕ್ರಮವನ್ನು ಎಸ್. ಸಿ. ಘಟಕದ ತಾಲೂಕ ಅಧ್ಯಕ್ಷರಾದ ಅಮರೇಶ ಗಿರಿಜಾಲಿ ಹಾಗೂ ಕಾಂಗ್ರೆಸ್ ನ ಹಿರಿಯ ಗಣ್ಯರ ಸಮಕ್ಷಮದಲ್ಲಿ ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಲಾಯಿತು. ನಂತರ ಆಶ್ರಮದ ವತಿಯಿಂದ ಕೆ.ಪಿ.ಸಿ.ಸಿ. ಘಟಕದ ತಾಲೂಕಾಧ್ಯಕ್ಷರಾದ ಅಮರೇಶ ಗಿರಿಜಾಲಿ ಪಕ್ಷದ ಯುವ ಮುಖಂಡರಾದ ಖಾಜಾ ಹುಸೇನ್ ರೌಡಕುಂದ ಇವರುಗಳನ್ನು ಆಶ್ರಮದ ವತಿಯಿಂದ ಗೌರವಿಸಲಾಯಿತು. ಕಾರ್ಯಕ್ರಮವನ್ನು ಉದ್ಘಾಟಿಸಿ ಎಸ್. ಸಿ. ಘಟಕದ ತಾಲೂಕ ಅಧ್ಯಕ್ಷರಾದ ಅಮರೇಶ ಗಿರಿಜಾಲಿ ಮಾತನಾಡಿ ಇಂದು ನಮ್ಮ ನಾಯಕನ ಜನ್ಮದಿನ ಕಾರುಣ್ಯ ಕುಟುಂಬದಲ್ಲಿ ಆಚರಿಸುತ್ತಿರುವುದು. ನಮ್ಮೆಲ್ಲರಿಗೆ ಮತ್ತೆ ನಮ್ಮ ನಾಯಕರಿಗೆ ಸಂತೋಷವನ್ನುಂಟು ಮಾಡಿದೆ. ಸಾಮಾನ್ಯ ರೈತನ ಮಗನಾಗಿ ಶುದ್ದ ರಾಜಕಾರಣಕ್ಕೆ ಕಾರಣವಾಗಿರುವ ಬಸನಗೌಡ ಬಾದರ್ಲಿ ಅವರು ದೀನದಲಿತರ ಬಡಜನರ ನೊಂದ ಜೀವಿಗಳ ನಾಡಿಮಿಡಿತವಾಗಿದ್ದಾರೆ. ಚಿಕ್ಕ ವಯಸ್ಸಿನಲ್ಲಿ ಬಹುದೊಡ್ಡ ಸಾಮಾಜಿಕ ಜವಾಬ್ದಾರಿ ನಿರ್ವಹಿಸುತ್ತಿರುವ ನಮ್ಮ ನಾಯಕರು ಸರ್ವ ಸಮಾಜದ ಪ್ರೀತಿಗೆ ಪಾತ್ರರಾಗಿದ್ದಾರೆ. ನಮ್ಮ ಬಸನಗೌಡ ಬಾದರ್ಲಿ ಅಪರೂಪದ ರಾಜಕಾರಣಿಯಾಗಿ ನಮ್ಮೆಲ್ಲರಿಗೆ ಸ್ಫೂರ್ತಿಯಾಗಿದ್ದಾರೆ. ಸಾಮಾನ್ಯ ಕುಟುಂಬದ ನಮ್ಮೆಲ್ಲರನ್ನು ಸ್ವಂತ ಸಹೋದರರಂತೆ ಕಾಣುವ ಮೂಲಕ ನಮಗೆ ಯುವಕರಿಗೆ ಮಾದರಿಯಾಗಿದ್ದಾರೆ. ನಮ್ಮ ಬಸನಗೌಡ ಬಾದರ್ಲಿ ಅವರ ರಾಜಕಾರಣ ಸಿಂಧನೂರಿನಲ್ಲಿ ಇತಿಹಾಸ ಸೃಷ್ಟಿಸಿದೆ. ಸಿಂಧನೂರನ್ನು ಜಿಲ್ಲೆಯನ್ನಾಗಿಸಬೇಕು ಎನ್ನುವ ಅವರ ಸಂಕಲ್ಪಕ್ಕೆ ಸರ್ವ ಸಮಾಜದ ಗುರುಹಿರಿಯರು ಬೆಂಬಲಿಸಿರುವುದು ಅವರಿಗೆ ಇನ್ನೂ ಹೆಚ್ಚಿನ ಹೋರಾಟ ಮಾಡಲು ಶಕ್ತಿ ತುಂಬಿದಂತಾಗಿದೆ. ಮತ್ತು ವಿಶೇಷವಾಗಿ ಕಾರುಣ್ಯ ಆಸ್ರವಕ್ಕೆ ಸ್ವಂತ ಜಾಗ ಹಾಗೂ ಅನುದಾನ ಕೊಡಿಸುವ ನಿಟ್ಟಿನಲ್ಲಿ ಅವರು ಪ್ರಾಮಾಣಿಕ ಪ್ರಯತ್ನ ಮಾಡುತ್ತಾರೆ ಎನ್ನುವ ಭರವಸೆ ನನಗೆ ಹಾಗೂ ನಮ್ಮೆಲ್ಲರಿಗಿದೆ. ಇಡೀ ರಾಜ್ಯಾದ್ಯಂತ ಕಾಂಗ್ರೆಸ್ ಪಕ್ಷವನ್ನು ಕಟ್ಟಿ ಬೆಳೆಸಿ ಅಪರೂಪದ ಶ್ರೇಷ್ಠ ಯುವಶಕ್ತಿಯಾಗಿ ಬರೀ ನಮ್ಮ ರಾಜಕಲ್ಲದೆ ದೇಶಕ್ಕೆ ಮಾದರಿಯಾಗಿರುವ ಬಸನಗೌಡ ಬಾದರ್ಲಿ ನಮ್ಮೆಲ್ಲರಿಗೆ ಸ್ಫೂರ್ತಿ ಇಂದು ನಾವೆಲ್ಲರೂ ಅವರ ಜನ್ಮದಿನವನ್ನು ಆಚರಣೆ ಮಾಡುತ್ತಿರುವುದು ಸರಳವಾದರೂ ಕೂಡ ಅರ್ಥಪೂರ್ಣ ಕಾರ್ಯಕ್ರಮದ ಮೂಲಕ ಅವರ ಜನ್ಮದಿನವನ್ನು ನಾವೆಲ್ಲರೂ ಆಚರಿಸುತ್ತಿದ್ದೇವೆ ಎಂದು ಮಾತನಾಡಿದರು. ನಂತರ ಯುವ ಮುಖಂಡರಾದ ಖಾಜಾ ಹುಸೇನ್ ರೌಡಕುಂದ ಮಾತನಾಡಿ ನಮ್ಮೆಲ್ಲರಿಗೆ ಸನ್ಮಾರ್ಗದ ಹಾದಿಯಲ್ಲಿ ನಮ್ಮ ನಾಯಕರು ತಮ್ಮ ಸ್ವಂತ ಭವಿಷ್ಯವನ್ನು ಯೋಚನೆ ಮಾಡದೆ ತಮ್ಮ ಇಡೀ ಜೀವನವನ್ನು ರಾಜಕಾರಣದ ಮೂಲಕ ಶುದ್ಧ ಸಮಾಜವನ್ನು ನಿರ್ಮಿಸುವ ಅವರ ಹೋರಾಟಕ್ಕೆ ನಾವುಗಳೆಲ್ಲರೂ ಸದಾ ಕಾಲ ಅವರ ಜೊತೆಗಿರುತ್ತೇವೆ. ಕೊರೋನಾದಂತಹ ಭೀಕರದ ದಿನಗಳಲ್ಲಿ ತಮ್ಮ ಜೀವನವನ್ನು ಲೆಕ್ಕಿಸದೆ ನಮ್ಮ ಸಿಂಧನೂರು ತಾಲೂಕ ಅಲ್ಲದೆ ಇಡೀ ರಾಜ್ಯಕ್ಕೆ ಇವರು ಮಾಡಿರುವ ಸೇವೆ ಅನೇಕ ರಾಜಕಾರಣಿಗಳಿಗೆ ಮಾದರಿಯಾಗಿದೆ ಎಂದು ಮಾತನಾಡಿದರು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಹಬೀಬ್ ಖಾಜಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳು ಯುವ ಕಾಂಗ್ರೆಸ್ ಸಮಿತಿ. ತಿಮ್ಮಣ್ಣ ನಾಯಕ. ಹಂಪಮ್ಮ ವಲಕಮದಿನ್ನಿ. ನಿರುಪಾದಿ ಸಾಸಲಮರಿ. ಅಮರಯ್ಯ ಸ್ವಾಮಿ ಹಿರೇಮಠ ಹರೇಟನೂರು ಪ್ರಧಾನ ಅರ್ಚಕರು ಆದಿಶಕ್ತಿ ಶ್ರೀ ದ್ಯಾವಮ್ಮ ದೇವಿ ದೇವಸ್ಥಾನ ಹರೇಟನೂರು ಹಾಗೂ ಸಂಸ್ಥಾಪಕರು ಕಾರುಣ್ಯ ಆಶ್ರಮ ಸಿಂಧನೂರು.ಹನುಮಂತ ಕರ್ನಿ ಅಧ್ಯಕ್ಷರು ಎನ್. ಯು. ಸಿ. ಐ. ಸಿಂಧನೂರು. ಹುಸೇನಪ್ಪ ಧುಮತಿ. ಆದನಗೌಡ. ಫಕೀರಪ್ಪ ರಾಮತ್ನಾಳ ಅಧ್ಯಕ್ಷರು ಅಸಂಘಟಿತ ಕಾರ್ಮಿಕ ಘಟಕ. ಫ್ರಾನ್ಸ್ ರೈತನಗರ ಕ್ಯಾಂಪ್. ವೀರೇಶ ಉಪ್ಪಲದೊಡ್ಡಿ. ಶಾಬಾಜ್ ಅಧ್ಯಕ್ಷರು ಯುವ ಕಾಂಗ್ರೆಸ್ ಸಮಿತಿ ಸಿಂಧನೂರು ನಗರ. ಶ್ಯಾಮೀದ್ ಗುಂಜಳ್ಳಿ ಅಧ್ಯಕ್ಷರು ಯುವ ಕಾಂಗ್ರೆಸ್ ಸಮಿತಿ ಮಸ್ಕಿ ವಿಧಾನಸಭಾ ಕ್ಷೇತ್ರ. ರಾಮಾಚಾರಿ ಯುವ ಮುಖಂಡರು ಬೆಳಗುರ್ಕಿ. ಹನುಮೇಶ ಬೆಳಗುರ್ಕಿ ಆಪ್ತ ಸಹಾಯಕರು. ಸಮೀನಾ. ಅಮರೇಶ ಹತ್ತಿಗುಡ್ಡ. ಖಾದರ್ ಬಿ. ಜೈನಾಬಿ. ಚಾಮುಂಡಿ. ವಜ್ರಮ್ಮ. ನವೀನ್. ಹನುಮೇಶ. ತಿಮ್ಮಣ್ಣ. ಅಶೋಕ ಮೇಗಳಮನಿ ಗೊರೆಬಾಳ. ಸುದೀಪ್. ಶ್ರವಣ್ ಕುಮಾರ್. ಮುನ್ನಾ. ಮೈಬೂ. ಮಂಜು. ಪ್ರದೀಪ್ ಗೊರೆಬಾಳ. ಮಂಜುನಾಥಗೌಡ. ಚಂದ್ರು ಗೌಡ ಬಾದರ್ಲಿ. ಬಸವರಾಜ ಜಾಲವಾಡಗಿ. ಕುಮಾರ್ ಚವಾಣ್. ರಫಿ. ಖಾಜಾ ಬಂದೇನವಾಜ್. ಹಾಗೂ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸಯ್ಯಸ್ವಾಮಿ ಹಿರೇಮಠ. ಶ್ರೀಮಠ ಸೇವಾ ಟ್ರಸ್ಟ್ ನ ಸದಸ್ಯರಾದ ಸುಜಾತ ಹಿರೇಮಠ. ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲ್ಲದಗುಡ್ಡ. ಸಿದ್ದಯ್ಯ ಸ್ವಾಮಿ. ಮರಿಯಪ್ಪ.ಜ್ಯೋತಿ. ಹಾಗೂ ಬಸನಗೌಡ ಬಾದರ್ಲಿ ಅಭಿಮಾನಿ ಬಳಗದ ಹಲವಾರು ಅಭಿಮಾನಿಗಳು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರುಗಳು ಉಪಸ್ಥಿತರಿದ್ದರು





# ಫೆ.26ರಿಂದ ಫೆ.28ರವರೆಗೆ ರಸ್ತೆ ಸಂಚಾರ ಸಮೀಕ್ಷೆ

❑ ನೈಜ್ಯ ದೆಸೆ ನ್ಯೂಸ್

ರಾಯಚೂರು (ಕರ್ನಾಟಕ ವಾರ್ತೆ): ಲೋಕೋಪಯೋಗಿ ಇಲಾಖೆಯಿಂದ ಪ್ರತಿ ವರ್ಷಕ್ಕೊಮ್ಮೆ ಎರಡು ದಿನ ಮತ್ತು ಐದು ವರ್ಷಗಳಿಗೊಮ್ಮೆ ಏಳು ದಿನಗಳ ರಾಜ್ಯ ಹೆದ್ದಾರಿಗಳು, ಜಿಲ್ಲಾ ಮುಖ್ಯ ರಸ್ತೆಗಳ ಮೇಲೆ ವಾಹನ ಸಂಚಾರ ಸಮೀಕ್ಷೆಯ ಕಾರ್ಯವನ್ನು ಕೈಗೊಳ್ಳಲಾಗುತ್ತದೆ. ಈ ಸಮೀಕ್ಷೆಯಿಂದ ಸಂಗ್ರಹಿಸಿದ ಮಾಹಿತಿಯಿಂದ ಸರ್ಕಾರಕ್ಕೆ ರಸ್ತೆಗಳ ಸಂಚಾರ ಸಾಂಧ್ರತೆ ಸಂಚಾರ ತೀವ್ರತೆ ಕಂಡು ಹಿಡಿಯುವುದಕ್ಕೆ ರಸ್ತೆಗಳ ಅಗಲಳತೆ ನಿರ್ಧರಿಸಲು ರಸ್ತೆಗಳನ್ನು ಮೇಲ್ದರ್ಜೆಗೇರಿಸಲು ರಸ್ತೆಗಳ ಸ್ಥಿತಿಗತಿ ಸುಧಾರಿಸಲು ಅನುಕೂಲವಾಗುತ್ತದೆ.ಪ್ರಸ್ತುತ ವರ್ಷದಲ್ಲಿ ಫೆ.26ರ ಬೆಳಿಗ್ಗೆ 6 ಗಂಟೆಯಿಂದ ಫೆ.28ರ ಬೆಳಿಗ್ಗೆ 6 ಗಂಟೆಯವರೆಗೆ ಒಟ್ಟು ಎರಡು ದಿನಗಳ ರಸ್ತೆ ಸಂಚಾರ ಸಮೀಕ್ಷೆ ಕಾರ್ಯವನ್ನು ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳ ಮೇಲೆ ಸ್ಥಾಪಿಸಲಾಗುವ ಕ್ಯಾಮರ ಸಮೇತ ಸಮೀಕ್ಷಾ ಕೇಂದ್ರಗಳಲ್ಲಿ ಕೈಗೊಳ್ಳಲಾಗುತ್ತದೆ.ಲೋಕೋಪಯೋಗಿ ಇಲಾಖೆಯಿಂದ ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳ ಮೇಲೆ ರಸ್ತೆ ಸಂಚಾರ ಸಮೀಕ್ಷೆ ಕೈಗೊಳ್ಳಲಾಗುತ್ತದೆ. ಇದಕ್ಕಾಗಿ ರಸ್ತೆಗಳ ಮೇಲೆ ಕ್ಯಾಮರ ಸಮೇತ ಸಮೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗುತ್ತದೆ. ಸಮೀಕ್ಷಾ ಕೇಂದ್ರಗಳಿದ್ದಲ್ಲಿ ವಾಹನ ರಸ್ತೆ ಸಂಚಾರ ಸಮೀಕ್ಷೆ ಕೇಂದ್ರವಿದೆ, ತಮ್ಮ ವಾಹನಗಳನ್ನು ನಿಧಾನವಾಗಿ ಚಲಿಸಿ ಎಂದು ಸೂಚನಾ ಫಲಕಗಳನ್ನು ಅಳವಡಿಸಿರುತ್ತಾರೆ. ಎಲ್ಲಾ ವಾಹನ ಚಾಲಕರು ತಮ್ಮ ವಾಹನವನ್ನು ನಿಧಾನವಾಗಿ ಸಾಗಿಸಿಕೊಂಡು ಮುಂದೆ ಸಾಗಿಸಬೇಕು ಎಂದು ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೇಂದ್ರ ಪುರಸ್ಕೃತ ಯೋಜನೆಗಳ ಪ್ರಗತಿಗೆ ವೇಗ ನೀಡಿ:

## ಸಂಸದ ಜಿ.ಕುಮಾರ ನಾಯಕ ಕಟ್ಟುನಿಟ್ಟಿನ ನಿರ್ದೇಶನ




❑ ನೈಜ್ಯ ದೆಸೆ ನ್ಯೂಸ್

ರಾಯಚೂರು (ಕರ್ನಾಟಕ ವಾರ್ತೆ): ರೈಲ್ವೆ ಲೈನ್ ನಿರ್ಮಾಣ ಯೋಜನೆ, ಇಂಡಿಯಾ ಪೋಸ್ಟ್, ಬಿಎಸ್‌–ಎನ್‌ಎಲ್, ಸರ್ವ ಶಿಕ್ಷಣ ಶಿಕ್ಷಣ ಅಭಿಯಾನ, ಸ್ವಚ್ಛ ಭಾರತ ಮಿಷನ್, ಜಲಜೀವನ ಮಿಷನ್, ಪ್ರಧಾನಮಂತ್ರಿ ಉಜ್ವಲ ಯೋಜನೆ, ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆ, ಸೇರಿದಂತೆ ವಿವಿಧ ಕೇಂದ್ರ ಪುರಷ್ಕೃತ ಯೋಜನೆಗಳ ಪ್ರಗತಿಗೆ ವೇಗ ನೀಡಬೇಕು ಎಂದು ರಾಯಚೂರು ಲೋಕಸಭಾ ಕ್ಷೇತ್ರದ ಸದಸ್ಯರಾದ ಜಿ. ಕುಮಾರ ನಾಯಕ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಫೆ.21ರಂದು ನಡೆದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಮೊದಲಿಗೆ ಕೃಷಿ ಇಲಾಖೆಯ ಯೋಜನೆಗಳ ಪ್ರಗತಿಯ ಬಗ್ಗೆ ಸಂಸದರು ಕೇಳಿದರು. ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ರಾಯಚೂರು ಜಿಲ್ಲೆಯಲ್ಲಿ 2025ನೇ ಸಾಲಿನ ಮುಂಗಾರಿನಲ್ಲಿ 12,477 ರೈತರು ಮತ್ತು ಹಿಂಗಾರಿನಲ್ಲಿ 6909 ರೈತರು ನೋಂದಣಿ ಮಾಡಿದ್ದಾರೆ. ವಿಮಾ ಸಂಸ್ಥೆಯಿಂದ ಬೆಳೆವಿಮೆ ಪರಿಹಾರ ಇತ್ಯರ್ಥಪಡಿಸುವ ಕಾರ್ಯ ಪ್ರಗತಿಯಲ್ಲಿದೆ. ರಾಯಚೂರು ಜಿಲ್ಲೆಯಲ್ಲಿ ಒಟ್ಟು 2,34,988 ರೈತರಿಗೆ 736.14 ಕೋಟಿ ರೂ. ಪಿಎಂ ಕಿಸಾನ್ ಯೋಜನೆಯಡಿ ಕೇಂದ್ರ ಸರ್ಕಾರವು ನೆರವು ನೀಡಿದೆ ಎಂದು ಕೃಷಿ ಜಂಟಿ ನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು. ರಾಯಚೂರು ಫಲವತ್ತಾದ ಮಣ್ಣು ಹೊಂದಿದ ಜಿಲ್ಲೆಯಾಗಿದ್ದು, ರೈತರಿಗೆ ನ್ಯಾಯ ಸಿಗುವ ದಿಶೆಯಲ್ಲಿ ಒಂದು ಜಿಲ್ಲೆ ಒಂದು ಉತ್ಪನ್ನ ಯೋಜನೆಯ ಅನುಷ್ಠಾನಕ್ಕೆ ಹೆಚ್ಚಿನ ಒತ್ತು ಕೊಡಬೇಕು ಎಂದು ಸಂಸದರು ಕೃಷಿ ಅಧಿಕಾರಿಗಳಿಗೆ ಸೂಚನೆ ನೀಡಿದರು. ಒಂದು ಜಿಲ್ಲೆ ಒಂದು ಉತ್ಪನ್ನ ಯೋಜನೆಯಡಿ ರಾಯಚೂರು ಜಿಲ್ಲೆಯಲ್ಲಿ ಒಣಮೆಣಸಿನಕಾಯಿ ಮಾರುಕಟ್ಟೆ ನಿರ್ಮಾಣಕ್ಕಾಗಿ ಆಯ್ಕೆ ಮಾಡಲಾಗಿರುತ್ತದೆ ಎಂದು ಕೃಷಿ ಅಧಿಕಾರಿಗಳು ಸಭೆಗೆ ವಿವರಿಸಿದರು.ರಾಯಚೂರು ಜಿಲ್ಲೆಯಲ್ಲಿ ರೈಲ್ವೆ ಲೈನ್ ನಿರ್ಮಾಣ ಯೋಜನೆಯ ಪ್ರಗತಿಯ ಬಗ್ಗೆ ಸಂಸದರು ಕೇಳಿದರು. ಮುನಿರಾಬಾದ್–ಮೆಹಬೂಬನಗರ ರೈಲ್ವೆ ಲೈನ್ ನಿರ್ಮಾಣದ ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ಸಿಂಧನೂರ, ರಾಯಚೂರು, ಮಾನವಿ, ಸಿರವಾರ ತಾಲೂಕಿನ ಕೆಲವು ಹಳ್ಳಿಗಳಲ್ಲಿ ನಡೆದ ಭೂಸ್ವಾಧೀನ ಪ್ರದೇಶದ ವಿಸ್ತೀರ್ಣವನ್ನು ರೈಲ್ವೆ ಇಲಾಖೆಗೆ ಹಸ್ತಾಂತರಿಸಲಾಗಿದೆ. ಕೆಲವು ಕಡೆಗಳಲ್ಲಿ ಹೊಸದಾಗಿ ಪ್ರಸ್ತಾವನೆ ಸಲ್ಲಿಸಿದ್ದು ಭೂಸ್ವಾಧೀನ ಪ್ರಕ್ರಿಯೆಗೆ ಕ್ರಮ ವಹಿಸಲಾಗುತ್ತದೆ. ಗದಗ–ವಾಡಿ ರೈಲ್ವೆ ಯೋಜನೆಗೆ ಸಂಬಂಧಿಸಿದಂತೆ ರಾಯಚೂರು ತಾಲೂಕಿನ ಕುರುಬದೊಡ್ಡಿ,ಚಂದ್ರಬಂಡ, ಸಿಂಗನೋಡಿ ಗ್ರಾಮಗಳಲ್ಲಿ ಹೊಸದಾಗಿ ಕೈಗಾರಿಕಾ ಪ್ರದೇಶ ಮತ್ತು ಸೌರ ವಿದ್ಯುತ್ ಸ್ಥಾಪನೆಗಾಗಿ ಭೂಸ್ವಾಧಿನಪಡಿಸಿಕೊಳ್ಳುವ ಪ್ರಕ್ರಿಯೆ ನಡೆಯುತ್ತಿದೆ ಎಂದು ಎಂದು ರೈಲ್ವೆ ಇಲಾಖೆಯ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.ಬೆಂಗಳೂರು, ಕಲಬುರಗಿ, ಸೊಲ್ಲಪುರ ಸೇರಿದಂತೆ ಪ್ರಮುಖ ವಾಣಿಜ್ಯ ನಗರಗಳ ಮೂಲಕ ದಕ್ಷಿಣದ ಚೆನ್ನೈದಿಂದ ಉತ್ತರದ ಹೊಸದಿಲ್ಲಿವರೆಗೆ ಪ್ರಮುಖ ರೈಲುಗಳು ರಾಯಚೂರು ಮಾರ್ಗವಾಗಿಯೇ ಸಂಚರಿಸುತ್ತವೆ. ಇದು ನಮ್ಮ ಭಾಗ್ಯ. ಈ ರೈಲ್ವೆ ಲೈನದಲ್ಲಿ ಪ್ರತಿ ದಿನ ಸಾಕಷ್ಟು ಗೂಡ್ಸ್ ರೈಲುಗಳು ಸಂಚರಿಸುತ್ತವೆ. ಕೃಷಿ, ತೋಟಗಾರಿಕೆ, ವಾಣಿಜ್ಯ ಉತ್ಪನ್ನಗಳ ಸರಬರಾಜಿಗೆ ಇದು ಸಾಕಷ್ಟು ಅನುಕೂಲವಾಗಲಿದೆ. ಹಾಗಾಗಿ ರೈಲ್ವೆ ಇಲಾಖೆಗೆ ಸಂಬಂಧಿಸಿದ ಯಾವುದೇ ಕಾರ್ಯಗಳ ಪ್ರಗತಿಗೆ ಒತ್ತು ಕೊಡಬೇಕು ಎಂದು ಸಂಸದರು ಅಧಿಕಾರಿಗಳಿಗೆ ಸೂಚನೆ ನೀಡಿದರು.ರೈಲ್ವೆ ಯೋಜನೆಗಳ ಅನುಷ್ಠಾನಕ್ಕೆ ಭೂಮಿ ಒದಗಿಸುವ ರೈತರಿಗೆ ಭೂ ಪರಿಹಾರ ಪಾವತಿಯು ಕಾಲಮಿತಿಯೊಳಗೆ ಆಗಬೇಕು. ರೈತರಿಗೆ ನ್ಯಾಯ ಸಿಗುವಂತಾಗಬೇಕು.ಇದಕ್ಕೆ ಅಧಿಕಾರಿಗಳು ಹೆಚ್ಚಿನ ಒತ್ತು ಕೊಡಬೇಕು. ಸಭೆಯಲ್ಲಿ ವರದಿ ಒಪ್ಪಿಸುವುದಷ್ಟೇ ಅಧಿಕಾರಿಗಳ ಕೆಲಸವಲ್ಲ, ಕಾಳಜಿ ಮತ್ತು ಶ್ರದ್ಧೆಯಿಂದ ಕಾರ್ಯನಿರ್ವಹಿಸಬೇಕು ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಅಧಿಕಾರಿಗಳಿಗೆ ಇದೆ ವೇಳೆ ಸೂಚನೆ ನೀಡಿದರು.ಪಿಎಂಶ್ರೀ ಶಾಲೆಗಳಿಗೆ ಮಂಜೂರಾಗಿರುವ ಕಾಮಗಾರಿಗಳ ಬಗ್ಗೆ ಸಂಸದರು ಪರಿಶೀಲಿಸಿದರು. 2024–25ನೇ ಸಾಲಿಗೆ ಪಿಎಂಶ್ರೀ ಶಾಲೆಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಕೋಟಿ ಗೂ ಹೆಚ್ಚು ಅನುದಾನ ಮಂಜೂರಾಗಿದ್ದು, ಪಿಆರ್‌ಇಡಿ, ಲೋಕೋಪಯೋಗಿ ಇಲಾಖೆಗಳಿಂದ ಕೊಠಡಿಗಳ ನಿರ್ಮಾಣ ಕಾರ್ಯ ನಡೆಯುತ್ತಿದೆ. ಅದೇ ರೀತಿ 2025–26ನೇ ಸಾಲಿನಲ್ಲಿ 115 ಲಕ್ಷ ರೂ ವೆಚ್ಚದಲ್ಲಿ 4 ಶಾಲೆಗಳಲ್ಲಿ ಕೊಠಡಿಗಳ ನಿರ್ಮಾಣ ಕಾರ್ಯ ನಡೆಯುತ್ತಿದೆ. 2025–26ನೇ ಸಾಲಿನಲ್ಲಿ ಕೇಂದ್ರ ಅನುಮೋದನೆ ಮಂಡಳಿಯಿಂದ ಧರ್ತಿ ಅಬಾ ಜನ್ ಜಾತಿಯ ಗ್ರಾಮ ಉತ್ಕರ್ಷ ಅಭಿಯಾನ ಯೋಜನೆಯಡಿ ವಸತಿ ನಿಲಯಗಳ ನಿರ್ಮಾಣಕ್ಕೆ 23 ಕೋಟಿ ರೂ ಮಂಜೂರಾಗಿದೆ. 2025–26ನೇ ಸಾಲಿನಲ್ಲಿ ಕೆಕೆಆರ್‌ಡಿಬಿಯಿಂದ 35 ಕೆಪಿಎಸ್ ಶಾಲೆಗಳು ಮಂಜೂರಾಗಿವೆ. ಸಮಗ್ರ ಶಿಕ್ಷಣ ಕರ್ನಾಟಕದಿಂದ 2023–24ನೇ ಸಾಲಿನಲ್ಲಿ ಮಂಜೂರಾದ ಪೂರ್ವ ಪ್ರಾಥಮಿಕ ತರಗತಿಗಳನ್ನು 2024–25ನೇ ಸಾಲಿನಲ್ಲಿ 4 ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ತರಗತಿಗಳನ್ನು ಆರಂಭಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿ ಕೆ.ಡಿ.ಬಡಿಗೇರ ಅವರು ಸಭೆಗೆ ಮಾಹಿತಿ ನೀಡಿದರು.ಬಿಎಸ್‌ಎನ್‌ಎಲ್ ಯೋಜನೆಗಳ ಬಗ್ಗೆ ಸಂಸದರು ಕೇಳಿದರು. ಬಿಎಸ್‌ಎನ್‌ಎಲ್ ಅಡಿಯಲ್ಲಿ 4ಜಿ ಮೊಬೈಲ್ ಟವರ್‌ಗಳನ್ನು ಸ್ಥಾಪಿಸಲಾಗುತ್ತಿದೆ. ಈಗಾಗಲೇ ರಾಯಚೂರು ಜಿಲ್ಲೆಯಲ್ಲಿ ಪ್ರಸ್ತುತ 95 ಗ್ರಾಮ ಪಂಚಾಯತ್‌ಗಳಲ್ಲಿ ಇಂಟರ್‌ನೆಟ್ ಕಾರ್ಯನಿರ್ವಹಿಸುತ್ತಿದ್ದು, ಹಂತ ಹಂತವಾಗಿ ಎಲ್ಲಾ 191 ಗ್ರಾಮ ಪಂಚಾಯತ್‌ಗಳಿಗೆ ಇಂಟರ್‌ನೆಟ್ ಸಂಪರ್ಕ ನೀಡಲಾಗುತ್ತದೆ. ಮುಂದಿನ ಮೊಬೈಲ್ ವಿಸ್ತರಣಾ ಹಂತದಲ್ಲಿ, ಇನ್ನೂ ಮೊಬೈಲ್ ಸಂಪರ್ಕ ಅಥವಾ ಇಂಟರನೆಟ್ ಸೌಲಭ್ಯವಿಲ್ಲದ ಗ್ರಾಮಗಳಿಗೆ 4ಜಿ ಸೇವೆಗಳು ಒದಗಿಸುವ ಯೋಜನೆ ರೂಪಿಸಲಾಗಿದೆ ಎಂದು ಬಿಎಸ್‌ಎನ್‌ಎಲ್ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.ತೀವ್ರ ಅಸಮಾಧಾನ: ಸರ್ಕಾರದ ವಿವಿಧ ಕಾರ್ಯಕ್ರಮಗಳಿಗೆ ಫಲಾನುಭವಿಗಳಾದವರಿಗೆ ಸಾಲ ಸೌಕರ್ಯ ಮಂಜೂರಿ ಮಾಡಲು ಸಿ–ಬಿಲ್ ಸ್ಕೋರ್ ಏಕೆ ಕೇಳುತ್ತೀರಿ? ಎಂದು ಬ್ಯಾಂಕಿನ ಅಧಿಕಾರಿಗಳ ಕಾರ್ಯವೈಖರಿಯ ಬಗ್ಗೆ ಸಂಸದರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಕಡು ಬಡವರು, ಮಧ್ಯಮ ವರ್ಗದ ಜನರನ್ನು ಬ್ಯಾಂಕುಗಳಿಗೆ ಅಲೆದಾಡಿಸದೇ ಸರ್ಕಾರದ ಯೋಜನೆಯ ಫಲಾನುಭವಿ ಎಂಬುದನ್ನು ಖಚಿತಪಡಿಸಿಕೊಂಡು ಸಾಲಸೌಕರ್ಯ ನೀಡಲು ಎಲ್ಲ ಬ್ಯಾಂಕಿನ ಮ್ಯಾನೇಜರಗಳಿಗೆ ಆದೇಶ ಮಾಡಬೇಕು ಎಂದು ಸಂಸದರು ಲೀಡ್ ಬ್ಯಾಂಕಿನ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.ಜನತೆಗೆ ನೀರು ಪೂರೈಸಿ: ಜಲಜೀವನ ಮಿಷನ್ ಯೋಜನೆ ಅನುಷ್ಠಾನದ ಚರ್ಚೆ ವೇಳೆ ರಾಯಚೂರು ಗ್ರಾಮೀಣ ಶಾಸಕರಾದ ಬಸನಗೌಡ ದದ್ದಲ್ ಅವರು ಮಾತನಾಡಿ, ಜನತೆಗೆ ನೀರು ಪೂರೈಸುವ ಕಾರ್ಯವಾಗಬೇಕು. ನೀರು ಪೂರೈಸದಿದ್ದರೆ ಜನ ಬೀದಿಗಿಳಿದು ಪ್ರತಿಭಟಿಸುತ್ತಾರೆ ಎಂಬುದರ ಬಗ್ಗೆ ಅರಿವಿರಬೇಕು. ನಾವು ಜನರ ಭಾವನೆಗಳಿಗೆ ಸ್ಪಂದನೆ ನೀಡಬೇಕು. ಜಿಲ್ಲಾ ಪಂಚಾಯತ್ ಸಿಇಓ ಅವರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳೊಂದಿಗೆ ಕಾಲಕಾಲಕ್ಕೆ ಸಭೆ ನಡೆಸಿ ಕುಡಿಯುವ ನೀರಿನ ಯೋಜನೆಗಳ ಅನುಷ್ಠಾನಕ್ಕೆ ಹೆಚ್ಚಿನ ಆದ್ಯತೆ ಕೊಡಬೇಕು ಎಂದು ತಿಳಿಸಿದರು.ತನಿಖೆಗೆ ಒತ್ತಾಯ: ಜಲಜೀವನ ಮಿಷನ್ ಯೋಜನೆಯ ಕಾಮಗಾರಿಗಳ ಬಗ್ಗೆ ಸಭೆಯಲ್ಲಿ ಸುದೀರ್ಘ ಚರ್ಚೆ ನಡೆಯಿತು. ಜಲಜೀವನ ಮಿಷನ್ ಯೋಜನೆ ಸಂಪೂರ್ಣ ಫೇಲ್ ಆಗಿದೆ. ಕಳಪೆ ಕಾಮಗಾರಿಯ ಬಗ್ಗೆ ತನಿಖೆಗೆ ಆದೇಶ ಮಾಡಬೇಕು ಎಂದು ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ ನಾಯಕ ಅವರು ಸಭೆಯಲ್ಲಿ ಆಗ್ರಹಿಸಿದರು. ಅಧಿಕಾರಿಗಳಿಗೆ ನಿರ್ದೇಶನ: ರಾಯಚೂರು ಜಿಲ್ಲೆಯ ಎಲ್ಲ ಗ್ರಾಮೀಣ ಜನ ವಸತಿಗಳಿಗೆ ಹಾಗೂ 7 ನಗರ ಸ್ಥಳೀಯ ಸಂಸ್ಥೆಗಳಾದ ಮಾನ್ವಿ, ಮಸ್ಕಿ, ಕವಿತಾಳ, ತುರವಿಹಾಳ, ಬಳಗಾನೂರ, ಸಿರವಾರ ಮತ್ತು ಹಟ್ಟಿಗಳಿಗೆ ಡಿಬಿಒಟಿ ಆಧಾರದ ಮೇಲೆ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯನ್ನು ಜಲಜೀವನ ಮಿಷನ್ ಯೋಜನೆಯಡಿ ನಬಾರ್ಡ ಹಾಗೂ ಯುಡಿಡಿ ಅನುದಾನ ನೆರವಿನೊಂದಿಗೆ ಸಂಯೋಜಿತಗೊಳಿಸಿ ಅನುಷ್ಠಾನಗೊಳಿಸುವ ಕಾರ್ಯವು ವೇಗವಾಗಿ ನಡೆಯುವಂತೆ ನೋಡಿಕೊಳ್ಳಬೇಕು ಎಂದು ಸಂಸದರು ಇದೆ ವೇಳೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.ನಾಮ ನಿರ್ದೇಶಿತ ಸದಸ್ಯರಿಂದ ಅಸಮಾಧಾನ: ಇಂಡಿಯಾ ಪೋಸ್ಟ್ ಯೋಜನೆಗಳಿಗೆ ಸರಿಯಾದ ಪ್ರಚಾರ ಸಿಗುತ್ತಿಲ್ಲ. ಬಹುತೇಕ ಅಂಚೇ ಕಚೇರಿಗಳು ಹಳೆಯ ಕಟ್ಟಡದಲ್ಲೇ ಕಾರ್ಯ ನಿರ್ವಹಿಸುತ್ತಿವೆ. ಹಳ್ಳಿಗಳಲ್ಲಿ ಬಿಎಸ್‌ಎನ್‌ಎಲ್ ಸಂಪರ್ಕ ಸಾಧ್ಯವಾಗುತ್ತಿಲ್ಲ. ಕೇಂದ್ರ ಪುರಷ್ಕೃತ ಆರೋಗ್ಯ ಯೋಜನೆಗಳು ಜನರ ಮನೆ ಬಾಗಿಲಿಗೆ ತಲುಪುತ್ತಿಲ್ಲ. ಜಲಜೀವನ ಮಿಷನ್ ಯೋಜನೆ ಸಂಪೂರ್ಣ ಕಳಪೆಯಾಗಿದೆ ಎಂದು ನಾಮ ನಿರ್ದೇಶಿತ ಸದಸ್ಯರಾದ ಹನುಮಂತ್ರಾಯ ನಾಯಕ, ತಿಪ್ಪಣ್ಣ, ರಾಘವೇಂದ್ರ, ರಜಿಯಾ ಸುಲ್ತಾನ ಅವರು ಸಭೆಯಲ್ಲಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ ರೋಣಿ, ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್ ಹಾಗೂ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.





## ನೇಮಕಾತಿ ಪ್ರಕಟಣೆ

ಭಾರತೀಯ ಸೇನಾ ನೇಮಕಾತಿ 2026 – ವಿವಿಧ ಅಗ್ನಿವೀರ್ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಭಾರತೀಯ ಸೇನಾ ನೇಮಕಾತಿ 2026: ವಿವಿಧ ಅಗ್ನಿವೀರ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಭಾರತೀಯ ಸೇನೆಗೆ ಸೇರಿ ಫೆಬ್ರವರಿ 2026 ರ ಅಧಿಕೃತ ಅಧಿಸೂಚನೆಯ ಮೂಲಕ ಅಗ್ನಿವೀರ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅಖಿಲ ಭಾರತ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 01–ಏಪ್ರಿಲ್–2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು.ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 13–02–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 01–ಏಪ್ರಿಲ್–2026 ಆನ್‌ಲೈನ್ ಪರೀಕ್ಷೆಯ ದಿನಾಂಕ: 01ನೇ ಃ0 15ನೇ ಜೂನ್ 2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ: ಇಲ್ಲಿ ಕ್ಲಿಕ್ ªÀiÁrhttps://join-indianarmy.nic.in/Authentication.aspx ಅಧಿಕೃತ ವೆಬ್‌ಸೈಟ್: joinindianarmy.nic.in

## ರಕ್ತದಾನ ಮಹಾದಾನ, ಮಾನವತೆಯ ಅತ್ಯುನ್ನತ ಸೇವೆ: ಶಿವಗೆನಪ್ಪ ಎನ್‌ಎಸ್‌ಎಸ್ ಅಧಿಕಾರಿ

❑ ನೈಜ್ಯ ದೆಸೆ ನ್ಯೂಸ್




ಮಸ್ಕಿ: ತಾಲೂಕಿನ ಬುದ್ದಿನ್ನಿ ಎಸ್ ಗ್ರಾಮದಲ್ಲಿ ದೇವಾನಾಂ ಪ್ರಿಯ ಅಶೋಕ ಸರಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯ ಮಸ್ಕಿ ವತಿಯಿಂದ ಎನ್‌ಎಸ್‌ಎಸ್ ಶಿಬಿರ ಕಾರ್ಯಕ್ರಮ ನಡೆಯಿತು. ಅದರ ಅಂಗವಾಗಿ ರವಿವಾರ ಬೆಳಿಗ್ಗೆ ವಿದ್ಯಾರ್ಥಿಗಳು ಗ್ರಾಮದಲ್ಲಿನ ಪ್ರಮುಖ ಬೀದಿಗಳಲ್ಲಿ ಜಾಥಾ ನಡೆಸಿ ರಕ್ತದಾನದ ಮಹತ್ವವನ್ನು ಜನರಿಗೆ ತಿಳಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಎನ್–ಎಸ್‌ಎಸ್ ಅಧಿಕಾರಿ ಶಿವಗೆನಪ್ಪ ಅವರು, "ರಕ್ತದಾನ ಮಹಾದಾನವಾಗಿದ್ದು, ಮಾನವತೆಯ ಅತ್ಯುನ್ನತ ಸೇವೆಯಾಗಿದೆ. ತುರ್ತು ಪರಿಸ್ಥಿತಿ, ಅಪಘಾತ ಹಾಗೂ ಶಸ್ತ್ರಚಿಕಿತ್ಸೆಯ ಸಮಯದಲ್ಲಿ ರೋಗಿಗಳ ಜೀವ ಉಳಿಸಲು ರಕ್ತದಾನ ಅತ್ಯಂತ ಅವಶ್ಯಕ. 18 ರಿಂದ 65 ವರ್ಷದೊಳಗಿನ ಆರೋಗ್ಯವಂತರು ಮೂರರಿಂದ ನಾಲ್ಕು ತಿಂಗಳಿಗೊಮ್ಮೆ ಸ್ವಯಂಪ್ರೇರಿತವಾಗಿ ರಕ್ತದಾನ ಮಾಡಬಹುದು. ರಕ್ತದಾನ ಮಾಡುವುದರಿಂದ ದಾನಿಗಳ ಆರೋಗ್ಯವೂ ಉತ್ತಮವಾಗುತ್ತದೆ ಹಾಗೂ ಹೃದಯ ಕಾಯಿಲೆಗಳನ್ನು ತಡೆಗಟ್ಟಲು ಸಹಕಾರಿ ಆಗುತ್ತದೆ," ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಡಾ. ವಿರೂಪನಗೌಡ ಜೆ., ಡಾ. ವೀರೇಶ (ದೈಹಿಕ ನಿರ್ದೇಶಕರು), ಪ್ರಾಧ್ಯಾಪಕಿಯರಾದ ರೋಹಿಣಿ ಮೂರ್ತಿ, ಕನ್ಯಾಕುಮಾರಿ, ಗ್ರಾಮಸ್ಥರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ
ಸಂಪರ್ಕಿಸಿ 9902277588

## ಸೌದಾಗರ್ ಮೌಂಟೇಸರಿ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಟ್ಯಾಲೆಂಟ್ ಪರೀಕ್ಷೆ

❑ ನೈಜ್ಯ ದೆಸೆ ನ್ಯೂಸ್





ಸೌದಾಗರ್ ಮೌಂಟೇಸರಿ ಆಂಗ್ಲ ಮಾಧ್ಯಮ

ಸಿಂಧನೂರು:ನಗರದ ಸೌದಾಗರ್ ಮೌಂಟೇಸರಿ ಆಂಗ್ಲ ಮಾಧ್ಯಮ ಶಾಲೆಯಲ್ಲಿ ರವಿವಾರ ದಿನಾಂಕ 22 ಫೆಬ್ರುವ–ರಿಯಂದು 4, 5, 6 ಮತ್ತು 7ನೇ ತರಗತಿಯ ವಿದ್ಯಾರ್ಥಿಗಳಿಗಾಗಿ ಟ್ಯಾಲೆಂಟ್ ಪರೀಕ್ಷೆ ಯಶಸ್ವಿಯಾಗಿ ನಡೆಯಿತು.ನಗರದ ವಿವಿಧ ವಾರ್ಡ್‌ಗಳಿಂದ ಹಾಗೂ ಹಲವು ಶಾಲೆಗಳ ಸುಮಾರು ಎರಡು ನೂರಕ್ಕೂ ಹೆಚ್ಚು ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ಭಾಗವಹಿಸಿದರು.ಪರೀಕ್ಷೆಯು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಶಾಂತ ಹಾಗೂ ಸುವ್ಯವಸ್ಥಿತವಾಗಿ ನಡೆಯಿತು.ಪರೀಕ್ಷೆಯ ಸಮಗ್ರ ಜವಾಬ್ದಾರಿಯನ್ನು ಸಂಸ್ಥೆಯ ಅಧ್ಯಕ್ಷರಾದ ಕೆ.ಅಸದ್ ಖಾನ್, ಕಾರ್ಯದರ್ಶಿಗಳಾದ ಶಾರುಫ್ ಖಾನ್, ಆಡಳಿತ ಮಂಡಳಿ ಸದಸ್ಯರಾದ ಶ್ರೀಮತಿ ಶಮೀಮ್ ಹಾಗೂ ಶಾಲೆಯ ಶಿಕ್ಷಕರು ಮತ್ತು ಸಿಬ್ಬಂದಿ ವಹಿಸಿಕೊಂಡಿದ್ದರು. ಕಾರ್ಯಕ್ರಮಕ್ಕೆ ಯೋಗಗುರು ಎಂ. ಭಾಸ್ಕರ್ ರಾವ್, ಚಂದ್ರಶೇಖರ್ ಯರದಿಹಾಳ್ (ವರದಿಗಾರರು) ಹಾಗೂ ಹನುಮಂತಪ್ಪ ಸಯ್ಯದ್ ಮೈನುದ್ದೀನ್ ಅವರು ಪರೀಕ್ಷಾ ಪರೀವೀಕ್ಷಕರಾಗಿ ಆಗಮಿಸಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡಿದರು.ಪರೀಕ್ಷೆ ಯಶಸ್ವಿಯಾಗಿ ನಡೆದಿದ್ದು, ಪೋಷಕರು ಹಾಗೂ ವಿದ್ಯಾರ್ಥಿಗಳಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು.

# ಕಾರಟಗಿ ಪೊಲೀಸ್ ಇಲಾಖೆಯ ದಂಪತಿಗಳಿಂದ ಕಾರುಣ್ಯಾಶ್ರಮಕ್ಕೆ ಏರ್ ಕೂಲರ್ ವಿತರಣೆ ವಿತರಣೆ

## ಕಾರುಣ್ಯಾಶ್ರಮವು ನಮ್ಮ ಪೊಲೀಸ್ ಇಲಾಖೆಯ ಪ್ರೀತಿಗೆ ಪಾತ್ರವಾಗಿದೆ – ಶರಣಪ್ಪ ಪೊಲೀಸ್ ಅಧಿಕಾರಿಗಳು

❑ ನೈಜ್ಯ ದೆಸೆ ನ್ಯೂಸ್




ಸಿಂಧನೂರು– ಫೆ 22 ಕೊಪ್ಪಳ ಜಿಲ್ಲೆಯ ಕಾರಟಗಿ ಪೊಲೀಸ್ ಠಾಣೆಯ ಪೊಲೀಸ್ ಅಧಿಕಾರಿಗಳಾದ ಜಯಮ್ಮ ಶರಣಪ್ಪ ಈ ಪೊಲೀಸ್ ದಂಪತಿಗಳು ತಮ್ಮ ಮೂರನೇ ವರ್ಷದ ವಿವಾಹ ವಾರ್ಷಿಕೋತ್ಸವವನ್ನು ಸಿಂಧನೂರು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಬೇಸಿಗೆ ದಿನಗಳ ವಾತಾವರಣವನ್ನು ಗಮನದಲ್ಲಿಟ್ಟುಕೊಂಡು ಆಶ್ರಮದ ಆಶ್ರಯದಾತುರುಗಳಿಗೆ ಉತ್ತಮ ಗುಣಮಟ್ಟದ ದೊಡ್ಡ ಗಾತ್ರದ ಏರ್ ಕೂಲರ್ ಹಾಗೂ ಮಹಾಪ್ರಸಾದ ಸೇವೆ ಹಣ್ಣು ಹಂಪಲುಗಳನ್ನು ವಿತರಿಸುವ ಮೂಲಕ ಅಪಾರ ಕುಟುಂಬದ ಸಮಕ್ಷಮದಲ್ಲಿ ಸರಳವಾಗಿ ತಮ್ಮ ವಿವಾಹ ವಾರ್ಷಿಕೋತ್ಸವವನ್ನು ಆಚರಿಸಿಕೊಂಡರು. ಈ ಕಾರ್ಯಕ್ರಮದಲ್ಲಿ ಆಶ್ರಮದ ವತಿಯಿಂದ ಪೊಲೀಸ್ ದಂಪತಿಗಳಾದ ಜಯಮ್ಮ ಶರಣಪ್ಪ ಈ ದಂಪತಿಗಳನ್ನು ಆಶ್ರಮದ ವತಿಯಿಂದ ಗೌರವಿಸಿ ಸನ್ಮಾನಿಸಿ ಆಶೀರ್ವದಿಸಲಾಯಿತು. ನಂತರ ಕಾರಟಗಿ ಪೊಲೀಸ್ ಇಲಾಖೆಯ ಅಧಿಕಾರಿಗಳಾದ ಶರಣಪ್ಪ ಮಾತನಾಡಿ ಇಂತಹ ಕಾರ್ಯಕ್ರಮಗಳನ್ನು ನಾವು ದುಂದುವೆಚ್ಚ ಮಾಡದೆ ಇಂತಹ ಆಶ್ರಮಗಳಿಗೆ ಸಹಾಯ ಸಹಕಾರ ಮಾಡುವ ಮೂಲಕ ಆಚರಿಸಿಕೊಂಡಾಗ ಮಾತ್ರ ನಮ್ಮ ಸಂಸ್ಕೃತಿ ಉಳಿಯಲು ಸಾಧ್ಯ. ಈ ನಮ್ಮ ಕಾರುಣ್ಯಾಶ್ರಮವು ನಮ್ಮ ಪೊಲೀಸ್ ಇಲಾಖೆಯ ಪ್ರೀತಿಗೆ ಪಾತ್ರವಾಗಿದೆ. ನಮ್ಮ ಕಾರಟಗಿ ಪೊಲೀಸ ವ್ಯಾಪ್ತಿಯಲ್ಲಿ ಹಲವಾರು ಅಂದ ಅನಾಥ–'ರ ಬಾಳಿಗೆ ಬದುಕು ಕಟ್ಟಿಕೊಟ್ಟಿರುವ ಕಾರುಣ್ಯ ಆಶ್ರಮದಲ್ಲಿ ಇರುವಂತಹ ಎಲ್ಲ ಹಿರಿಯರು ಕೂಡ ನಮ್ಮ ತಂದೆ ತಾಯಿಗಳ ಸಮಾನರು ಮತ್ತು ಬುದ್ಧಿಮಾಂದ್ಯರು ಸಹೋದರ ಸಹೋದರಿಯರ ಸಮಾನರು ಎನ್ನುವ ಭಾವನೆ ನಮ್ಮ ಕುಟುಂಬದ್ದು. ಸ್ವಾರ್ಥದ ಈ ಜಗತ್ತಿನಲ್ಲಿ ನಿಸ್ವಾರ್ಥತೆಯ ಪಾಠಶಾಲೆಯಾಗಿರುವ ಕಾರುಣ್ಯ ಆಶ್ರಮದ ಸೇವೆ ಸಮಾಜಕ್ಕೆ ಮಾದ–ರಿಯಾಗಿದೆ. ಮಲಗಿದಲ್ಲಿಯೇ ತಮ್ಮೆಲ್ಲಾ ಚಟುವಟಿಕೆಗಳನ್ನು ಮಾಡಿಕೊಳ್ಳುವಂತಹ ಅನೇಕರಿಗೆ ಪ್ರೀತಿ ಕೊಟ್ಟು ಸ್ವಂತ ಮಕ್ಕಳ ಹಾಗೆ ಸೇವೆ ಮಾಡುತ್ತಿರುವ ಕಾರುಣ್ಯ ಆಶ್ರಮದ ಸಿಬ್ಬಂದಿಗಳಿಗೆ ನಮ್ಮ ಇಲಾಖೆಯ ಪರವಾಗಿ ಧನ್ಯವಾದಗಳು. ನಾನು ನನ್ನ ಧರ್ಮಪತ್ನಿ ಪೋಲಿಸ್ ಇಲಾಖೆಯಲ್ಲಿ ಪ್ರಾಮಾಣಿಕವಾದಂತ ಸೇವೆಯನ್ನು ಸಾರ್ವಜನಿಕರಿಗೆ ಒದಗಿಸುತ್ತಿದ್ದೇವೆ ಎನ್ನುವ ಆತ್ಮ ತೃಪ್ತಿ ನಮಗಿದೆ. ಬರೀ ನಮಗೆ ಜನ್ಮ ಜೀವ ಜೀವನ ರೂಪಿಸಿದವರಷ್ಟೇ ನಮ್ಮ ತಂದೆ ತಾಯಿಗಳು ಎನ್ನುಕೊಳ್ಳದೆ ಸಮಾಜದಲ್ಲಿರುವಂತ ಎಲ್ಲಾ ಹಿರಿಯರು ಕೂಡ ನಮ್ಮ ತಂದೆ ತಾಯಿಗಳ ಸಮಾನರು ಎನ್ನುವ ಭಾವನೆ ಪ್ರತಿಯೊಬ್ಬರ ಹತ್ತಿರ ಬಂದಾಗ ಮಾತ್ರ ಇಂತಹ ವೃದ್ಧಾಶ್ರಮಗಳ ಅವಶ್ಯಕತೆ ಇರುವುದಿಲ್ಲ. ಆದರೆ ಸುಮಾರು ವರ್ಷಗಳಿಂದ ಅನಿವಾರ್ಯಕ್ಕಾಗಿ ಹುಟ್ಟಿರುವ ಈ ಕಾರುಣ್ಯ ಸಂಸ್ಥೆ ನಿಜವಾದ ಅನಾಥರಿಗೆ ಆಸರೆಯಾಗಿರುವುದು ನಮ್ಮೆಲ್ಲರಿಗೆ ಸ್ಫೂರ್ತಿಯಾಗಿದೆ. ಮುಂದಿನ ದಿನಮಾನಗಳಲ್ಲೂ ಸಹ ನಮ್ಮ ಕಾರಟಗಿ ಪೊಲೀಸ್ ಠಾಣೆ ನನ್ನ ವೃತ್ತಿ ಸ್ನೇಹಿತರಿಂದ ಕಾರುಣ್ಯ ಆಶ್ರಮಕ್ಕೆ ನಿರಂತರ ಸಹಾಯ ಸಹಕಾರ ದೊರೆಯುತ್ತದೆ. ಇಂದು ನನ್ನ ವಿವಾಹ ವಾರ್ಷಿಕೋತ್ಸವದಲ್ಲಿ ಹರಸಿ ಹಾರೈಸಿ ಆಶೀರ್ವದಿಸಿರುವ ಕಾರುಣ್ಯ ಆಶ್ರಮದ ಕೂಸುಗಳಿಗೆ ಮತ್ತು ನನ್ನೆಲ್ಲಾ ಸ್ನೇಹಿತ–ರಿಗೆ ಸಹೋದ್ಯೋಗಿಗಳಿಗೆ ಹೃದಯಪೂರ್ವಕ ಹೃತ್ಪೂರ್ವಕ ಧನ್ಯವಾದಗಳು ಎಂದು ಭಾವನಾತ್ಮಕವಾಗಿ ಮಾತನಾಡಿ ಆಶ್ರಮದ ಸೇವೆಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತಪಡಿಸಿದರು. ಈ ಕಾರ್ಯಕ್ರಮದಲ್ಲಿ ಜಯಮ್ಮ ಪೊಲೀಸ್ ಅಧಿಕಾರಿಗಳು ಕಾರಟಗಿ ಪೊಲೀಸ್ ಠಾಣೆ. ಬಸಮ್ಮ ಕೆ.ಬಸಾಪುರ. ಬಸವರಾಜ.ಶ್ರೀನಿವಾಸ. ಚನ್ನಪ್ಪ.ಸುರೇಶ. ಆಲಂಭಾಷಾ.ವೆಂಕಟೇಶ. ಗವಿಸಿದ್ದೇಶ್ವರ.ರೆಡ್ಡಪ್ಪ ಚಂದ್ರಶೇಖರ. ಹಾಗೂ ಆಶ್ರಮದ ಸಂಸ್ಥಾಪಕರಾದ ವೇದಮೂರ್ತಿ ಅಮರಯ್ಯ ಸ್ವಾಮಿ ಹಿರೇಮಠ ಹರೇಟನೂರು. ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸಯ್ಯಸ್ವಾಮಿ ಹಿರೇಮಠ ಶ್ರೀಮಠ ಸೇವಾ ಟ್ರಸ್ಟ್ ನ ಸದಸ್ಯರಾದ ಸುಜಾತ ಹಿರೇಮಠ. ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದಗುಡ್ಡ. ಸಿದ್ದಯ್ಯ ಸ್ವಾಮಿ. ಮರಿಯಪ್ಪ. ಜ್ಯೋತಿ. ಮತ್ತು ಕಾರಟಗಿ ಪೊಲೀಸ್ ಠಾಣೆಯ ಹಲವಾರು ಅಧಿಕಾರಿಗಳು ಉಪಸ್ಥಿತರಿದ್ದರು



# ಸಹನಾ ಹೈಯರ್ ಪ್ರೈಮರಿ ಶಾಲೆಯಲ್ಲಿ ಪೋಷಕರಿಗಾಗಿ ವಿಶೇಷ ಕಾರ್ಯಗಾರ ಯಶಸ್ವಿ

❑ ನೈಜ್ಯ ದೆಸೆ ನ್ಯೂಸ್




ಸಿಂಧನೂರು : ಪ್ರೀತಿಯಿಂದ ಬೆಳೆಸೋಣ, ಅರಿವಿನಿಂದ ಮುನ್ನಡೆಸೋಣ" ಎಂಬ ವಿಷಯದ ಮೇಲೆ ಅನಿಕೇತನ ಸಭಾಂಗಣ, ಸಹನಾ ಶಾಲೆಯಲ್ಲಿ 22 ಫೆಬ್ರವರಿ ಭಾನುವಾರ ಬೆಳಗ್ಗೆ 10 ಗಂಟೆಗೆ ಆಯೋಜಿಸಲಾದ ಪೋಷಕರಿಗಾಗಿ ವಿಶೇಷ ಕಾರ್ಯಾಗಾರ ಯಶಸ್ವಿಯಾಗಿ ನೆರವೇ–ರಿತು."ಪ್ರೀತಿಯಿಂದ ಬೆಳೆಸೋಣ, ಅರಿವಿನಿಂದ ಮುನ್ನಡೆಸೋಣ" ಎಂಬ ವಿಷಯದಡಿ ನಡೆದ ಈ ಕಾರ್ಯಕ್ರಮದಲ್ಲಿ ಡಿಜಿಟಲ್ ಯುಗದ ಸವಾಲುಗಳ ನಡುವೆ ಮಕ್ಕಳ ಮಾನಸಿಕ ಮತ್ತು ಭಾವನಾತ್ಮಕ ಬೆಳವಣಿಗೆಯ ಕುರಿತು ಸವಿಸ್ತಾರ ಚರ್ಚೆ ನಡೆಯಿತು.ಕಾರ್ಯಕ್ರಮಕ್ಕೆ ಮುಖ್ಯ ಭಾಷಣಕಾರರಾಗಿ ಆಗಮಿಸಿದ್ದ ಡಾ. ವಿರೂಪಾಕ್ಷ ದೇವರಮನೆ, ಮನೋವೈದ್ಯರು ಮತ್ತು ಪಾಲಕತ್ವ ಕೋಚ್, ಪೋಷಕರಿಗೆ ಪರಿಣಾಮಕಾರಿ ಮಾರ್ಗದರ್ಶನ ನೀಡಿದರು. ಕಾರ್ಯಕ್ರಮದ ಪ್ರಮುಖ ಅಂಶಗಳು:ಮಕ್ಕಳನ್ನು ನಿಯಂತ್ರಿಸುವ ಬದಲು ಸಂಬಂಧವನ್ನು ಗಟ್ಟಿಗೊಳಿಸುವ ವಿಧಾನಗಳು Genera-tion Alpha ಮಕ್ಕಳ ಮನೋಭಾವ ಮತ್ತು ಡಿಜಿಟಲ್ ಪ್ರಭಾವದ ಪರಿಣಾಮ ಶಿಕ್ಷೆಯಿಲ್ಲದೆ ಶಿಸ್ತನ್ನು ರೂಪಿಸುವ ಸಕಾರಾತ್ಮಕ ಪಾಲಕತ್ವ ತಂತ್ರಗಳು ಮಕ್ಕಳೊಂದಿಗೆ ಭಾವನಾತ್ಮಕ ಸಂಪರ್ಕದ ಮಹತ್ವ ಡಾ. ದೇವರಮನೆ ಅವರು ತಮ್ಮ ಮಾತಿನಲ್ಲಿ,"ಮಕ್ಕಳಿಗೆ ನಾವು ಕೊಡುವ ಅತ್ಯಂತ ಅಮೂಲ್ಯವಾದ ಉಡುಗೊರೆ ನಮ್ಮ ಸಮಯ ಮತ್ತು ನಮ್ಮ ಮನಸ್ಸು. ಅವರು ಭವಿಷ್ಯದಲ್ಲಿ ನೆನಪಿಡುವುದು ವಸ್ತುಗಳಲ್ಲ, ನಮ್ಮ ಪ್ರೀತಿ ಮತ್ತು ಬೆಂಬಲದ ಭಾವನೆ," ಎಂದು ಹೇಳಿದರು.ಪೋಷಕರು ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಿ ತಮ್ಮ ಅನುಭವಗಳನ್ನು ಹಂಚಿಕೊಂಡರು. ಪ್ರಶ್ನೋತ್ತರ ಅವಧಿ ಅತ್ಯಂತ ಸ್ಪಂದನೀಯವಾಗಿತ್ತು. ಹಲವರು ಈ ರೀತಿಯ ಕಾರ್ಯಕ್ರಮಗಳು ಮಕ್ಕಳ ಭವಿಷ್ಯ ರೂಪಿಸಲು ಅತ್ಯಗತ್ಯವೆಂದು ಅಭಿಪ್ರಾಯಪಟ್ಟರು. ಕಾರ್ಯಕ್ರಮವು ಪೋಷಕರಲ್ಲಿ ಹೊಸ ಚಿಂತನೆಗೆ ದಾರಿ ಮಾಡಿಕೊಟ್ಟಿತು ಹಾಗೂ ಮಕ್ಕಳ ಮಾನಸಿಕ ಮತ್ತು ಭಾವನಾತ್ಮಕ ಆರೋಗ್ಯದ ಬಲವಾದ ಬುನಾದಿ ನಿರ್ಮಿಸಲು ಪ್ರೇರಣೆ ನೀಡಿತು.

ವರದಿಗಾರರು : ಲಾಜರ್ ಸಿರಿಲ್

# ಪರಿಶ್ರಮ ಮತ್ತು ಶ್ರದ್ಧೆಯಿಂದಲೇ ಸಾಧನೆ ಸಾಧ್ಯ : ಕೆ.ಈ.ನರಸಿಂಹ

❑ ನೈಜ್ಯ ದೆಸೆ ನ್ಯೂಸ್




ಮಾನ್ವಿ : ವಿದ್ಯಾರ್ಥಿಗಳು ನಿರಂತರ ಅಭ್ಯಾಸ ಮಾಡಬೇಕು, ಸತತ ಪ್ರಯತ್ನವೇ ಯಶಸ್ಸಿನ ಗುಟ್ಟು ಎಂದು ಕೆ.ಈ.ನರಸಿಂಹ ಹೇಳಿದರು. ಅವರು ಪಟ್ಟಣದ ನೇತಾಜಿ ಪಿಯು ಕಾಲೇಜಿನಲ್ಲಿ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಭಾವುಕ ಹಾಗೂ ಸ್ಮರಣೀಯ ಬೀಳ್ಕೊಡುಗೆ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪೋಷಕರು ಮಕ್ಕಳ ಸಾಧನೆಗೆ ಪ್ರಮುಖ ಆಧಾರ ಸ್ತಂಭರಾಗಿದ್ದು, ಅವರ ತ್ಯಾಗ ಮತ್ತು ಪ್ರೋತ್ಸಾಹವೇ ವಿದ್ಯಾರ್ಥಿಗಳ ಯಶಸ್ಸಿನ ಬುನಾದಿಯಾಗುತ್ತದೆ. ಆದ್ದರಿಂದ ಎಂದಿಗೂ ತಂದೆ–ತಾಯಿಯ ಮನಸ್ಸು ನೋಯಿಸಬಾರದು ಎಂದು ಅವರು ತಿಳಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಸಂಸ್ಥೆಯ ಕಾರ್ಯದರ್ಶಿ ಕೆ.ವಿಜಯಲಕ್ಷ್ಮಿ, ಸೋಲು ಬಂದರೆ ನಿರಾಶರಾಗಬೇಡಿ; ಅದನ್ನು ಪಾಠವಾಗಿ ಸ್ವೀಕರಿಸಿ ಮುಂದೆ ಸಾಗಿದರೆ ಜಯ ನಿಮ್ಮದೆ ಆಗುತ್ತದೆ ಎಂದು ವಿದ್ಯಾರ್ಥಿಗಳಿಗೆ ಧೈರ್ಯ ತುಂಬಿದರು. ಬಳಿಕ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡು ಕಾಲೇಜಿನ ನೆನಪುಗಳನ್ನು ಸ್ಮರಿಸಿದರು.ಕಾರ್ಯಕ್ರಮದಲ್ಲಿ ಸಂಸ್ಥೆಯ ಸಹ ಕಾರ್ಯದರ್ಶಿ ಕೆ.ರಾಜರವಿವರ್ಮಾ, ಡಾ. ಕೆ.ವಿನಯಾ, ಕಾಲೇಜಿನ ಮೇಲ್ವಿಚಾರಕ ಆರೀಫ್ ಹಾಗೂ ಉಪನ್ಯಾಸಕರಾದ ಚಂದ್ರು ಜಾಧವ್, ರಮೇಶ್, ವೀರನಗೌಡ, ಸದ್ದಾಂ, ನಾಗರಾಜ್, ಕಾವ್ಯ, ತ್ರಿವೇಣಿ ಉಪಸ್ಥಿತ–ರಿದ್ದರು. ಇದೇ ಸಂದರ್ಭದಲ್ಲಿ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು ಕಾಲೇಜಿಗೆ ಡಿಜಿಟಲ್ ಪ್ರಾಜೆಕ್ಟರ್ ಅನ್ನು ಕಾಣಿಕೆಯಾಗಿ ನೀಡಿದರು. ಕಾರ್ಯಕ್ರಮದ ಕೊನೆಯಲ್ಲಿ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಿತು ಹಾಗೂ ಎಲ್ಲಾ ವಿದ್ಯಾರ್ಥಿಗಳಿಗೆ ನೆನಪಿನ ಕಾಣಿಕೆ ವಿತರಿಸಲಾಯಿತು.



# ಬೊಮ್ಮನಹಳ್ಳಿ ಪಿಕೆಪಿಎಸ್ ಗೆ ಸಿದ್ದಪ್ಪ ಕಟ್ಟಿಮನಿ ಆಯ್ಕೆ







❑ ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ತಾಲೂಕಿನ ಬೊಮ್ಮನಹಳ್ಳಿ ಗ್ರಾಮದ ವಿವಿದೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘ ಇದರ ಆಡಳಿತ ಮಂಡಳಿಯ ಹಿಂದುಳಿದ ವರ್ಗ "ಅ" ಒಂದು ಸ್ಥಾನಕ್ಕೆ ರವಿವಾರ ದಂದು ನಡೆದ ಚುನಾವಣೆಯಲ್ಲಿ ಬೊಮ್ಮನಹಳ್ಳಿ ಗ್ರಾಮದ ಸಿದ್ದಪ್ಪ ಬಸಪ್ಪ ಕಟ್ಟಿಮನಿ ಇವರು ಆಯ್ಕೆಯಾದರು. ಸಂಘದ ಒಟ್ಟು 12 ಸ್ಥಾನಗಳ ಪೈಕಿ ಈ ಮೊದಲು 11 ಸ್ಥಾನಗಳಿಗೆ ಅವಿರೋಧ ಆಯ್ಕೆ ನಡೆದಿತ್ತು. ಎಲ್ಲಾ ಸ್ಥಾನಗಳ ಅವಿರೋಧ ಆಯ್ಕೆಗೆ ಗಣ್ಯರೆಲ್ಲರೂ ಸೇರಿ ಸಾಕಷ್ಟ ಕಸರತ್ತು ಮಾಡಿದ್ದರೂ 11 ಸ್ಥಾನಗಳ ಅವಿರೋಧ ಆಯ್ಕೆ ನಡೆದಿತ್ತು ಈ ಒಂದು ಸ್ಥಾನಕ್ಕೆ ಚುನಾವಣೆ ನಡೆಸುವುದು ಅನಿವಾರ್ಯವಾಗಿತ್ತು ಅದರಂತೆ ಫೆಬ್ರವರಿ 22ರಂದು ಅಂದರೆ ನಿನ್ನೆ ಈ ಒಂದು ಸ್ಥಾನಕ್ಕೆ ಚುನಾವಣೆಯನ್ನು ನಡೆಸಲಾಯಿತು. ಸದರಿ ಚುನಾವಣೆಯಲ್ಲಿ ಒಟ್ಟು 243 ಮತಗಳು ಚಲಾವಣೆ ಗೊಂಡಿದ್ದು 3 ಮತಗಳು ತಿರಸ್ಕೃತಗೊಂಡವು. ಇನ್ನುಳಿದ 240 ಮತಗಳಲ್ಲಿ ವಿಜೇತ ಅಭ್ಯರ್ಥಿ ಸಿದ್ದಪ್ಪ ಬಸಪ್ಪ ಕಟ್ಟಿಮನಿ ಇವರಿಗೆ 145 ಮತಗಳು ಹಾಗೂ ಅವರ ಪ್ರತಿಸ್ಪರ್ಧಿ ಖ್ಯಾತನಾಳ ಗ್ರಾಮದ ಮಾಳಪ್ಪ ಸಿದ್ದಪ್ಪ ಕಾಳಗಿ ಇವರಿಗೆ 95 ಮತಗಳ ಬಂದವು. ಸಿದ್ದಪ್ಪ ಕಟ್ಟಿಮನಿಯವರು 50 ಮತಗಳ ಅಂತರದಿಂದ ಗೆಲುವು ಸಾಧಿಸಿ ಆಯ್ಕೆಯಾದರು. ಸಹಕಾರಿ ಅಭಿವೃದ್ಧಿ ಅಧಿಕಾರಿ ವಿಜಯಕುಮಾರ್ ಉತ್ನಾಳ ಅವರು ರಿಟರ್ನಿಂಗ್ ಆಫೀಸರ್ ಆಗಿ ಕಾರ್ಯನಿರ್ವಹಿಸಿ ಫಲಿತಾಂಶ ಘೋಷಿಸಿದರು. ಸಂಘದ ಮುಖ್ಯ ಮುಖ್ಯ ಕಾರ್ಯನಿರ್ವಾಹಕ ಎಸ್.ಬಿ. ಬಿರಾದಾರ ಹಾಗೂ ಸಿಬ್ಬಂದಿಗಳು ಚುನಾವಣಾ ಪ್ರಕ್ರಿಯೆಗೆ ಸಹಕರಿಸಿದರು. ವಿಜಯೋತ್ಸವ: ಮುಖಂಡ ಮಡುಸೌಕಾರ ಬಿರಾದಾರ ಇವರ ನೇತೃತ್ವದಲ್ಲಿ ನಡೆದ ವಿಜಯೋತ್ಸವದಲ್ಲಿ ಕಟ್ಟಿಮನಿ ಅವರ ಬೆಂಬಲಿಗರು ಅಭಿಮಾನಿಗಳು ಪಟಾಕಿ ಸಿಡಿಸಿ ಗುಲಾಲು ಎರಚಿ ಸಿಹಿ ವಿತರಸಿ ಸಂಭ್ರಮಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಮುಖಂಡ ಮಡುಸೌಕಾರ ಬಿರಾದಾರ ಅವರು ಮತದಾರ ಬಾಂಧವರ ಸಹಕಾರದಿಂದ ಇಂದು ನಮಗೆ ವಿಜಯ ಲಭಿಸಿದೆ ನಾನು ಅವರನ್ನು ಅಭಿನಂದಿಸುತ್ತೇನೆ. ಮುಂದಿನ ದಿನಗಳಲ್ಲಿ ನಾವೆಲ್ಲರೂ ಒಂದಾಗಿ ಸಂಘದ ಅಭಿವೃದ್ಧಿಗಾಗಿ ಒಗ್ಗಟ್ಟಿನಿಂದ ಕೆಲಸ ಮಾಡುತ್ತೇವೆ ಎಂದರು. ಈ ಸಂದರ್ಭದಲ್ಲಿ ಹಲವಾರು ಮುಖಂಡರು ಹಾಗೂ ಅಭಿಮಾನಿಗಳು ಉಪಸ್ಥಿತರಿದ್ದರು.

# ಶಿಕ್ಷಣ ಮಾರ್ಗದರ್ಶಿ ವಿಶೇಷ

## M .V . Sc ಪಶು ಔಷಧಶಾಸ್ತ್ರ ಮತ್ತು ವಿಷಶಾಸ್ತ್ರ

MVSc (Master of Veterinary Science) in Veterinary Pharmacology and Toxicology ಎಂಬುದು ಎರಡು ವರ್ಷಗಳ (4 ಸೆಮಿಸ್ಟರ್‌ಗಳು) ಸ್ನಾತಕೋತ್ತರ ಕೋರ್ಸ್ ಆಗಿದೆ. M.V.Sc. ಪಶು ಔಷಧಶಾಸ್ತ್ರ ಮತ್ತು ವಿಷಶಾಸ್ತ್ರ – ಪಶುವೈದ್ಯಕೀಯ ಕ್ಷೇತ್ರವು ದಿನದಿಂದ ದಿನಕ್ಕೆ ಅಭಿವೃದ್ಧಿಯಾಗುತ್ತಿರುವ ಸಂದರ್ಭದಲ್ಲಿ, ಪ್ರಮುಖ ವಿಶೇಷ ಅಧ್ಯಯನಗಳಲ್ಲಿ ಒಂದಾಗಿದೆ M.V.Sc. (ಮಾಸ್ಟರ್ ಆಫ್ ವೆಟ–ರಿನರಿ ಸೈನ್ಸ್) ಪಶು ಔಷಧಶಾಸ್ತ್ರ ಮತ್ತು ವಿಷಶಾಸ್ತ್ರ. ಈ ವಿಭಾಗವು ಔಷಧಿಗಳ ಜಗತ್ತಿನ ಕುರಿತು, ಅವುಗಳನ್ನು ಪ್ರಾಣಿಗಳ ರೋಗ ಚಿಕಿತ್ಸೆಗಾಗಿ ಬಳಸುವ ವಿಧಾನಗಳ ಕುರಿತು ಹಾಗೂ ವಿಷಪದಾರ್ಥಗಳು ಪ್ರಾಣಿಗಳ ಮೇಲೆ ಬೀರುವ ಪರಿಣಾಮಗಳ ಕುರಿತು ಆಳವಾದ ಅಧ್ಯಯನವನ್ನು ಮಾಡುತ್ತದೆ. ಈ ಕ್ಷೇತ್ರದಲ್ಲಿ ವೃತ್ತಿ ಆರಿಸಿಕೊಳ್ಳಲು ಬಯಸುವವರಿಗಾಗಲಿ ಅಥವಾ ಇದರ ಬಗ್ಗೆ ಹೆಚ್ಚಿನ ಮಾಹಿತಿ ತಿಳಿದುಕೊಳ್ಳಲು ಇಚ್ಚಿಸುವವ–ರಿಗಾಗಲಿ, ಈ ಲೇಖನವು ಸಮಗ್ರ ಪರಿಚಯವನ್ನು ನೀಡುತ್ತದೆ M.V.Sc. ಪಶು ಔಷಧಶಾಸ್ತ್ರ ಮತ್ತು ವಿಷಶಾಸ್ತ್ರವು ಸ್ನಾತಕೋತ್ತರ ಪದವಿ ಕೋರ್ಸ್ ಆಗಿದ್ದು, ಪಶುವೈದ್ಯಕೀಯ ವೃತ್ತಿಪರರಿಗೆ ಔಷಧಶಾಸ್ತ್ರ (Pharmacol-ogy) ಮತ್ತು ವಿಷಶಾಸ್ತ್ರ (Toxicology) ವಿಷಯಗಳಲ್ಲಿ ಉನ್ನತ ಮಟ್ಟದ ಜ್ಞಾನ ಮತ್ತು ಕೌಶಲ್ಯಗಳನ್ನು ನೀಡಲು ವಿನ್ಯಾಸಗೊಳಿಸಲಾಗಿದೆ. ಈ ವಿಭಾಗವು ಪ್ರಾಣಿಗಳ ಆರೋಗ್ಯವನ್ನು ಕಾಪಾಡುವಲ್ಲಿ, ಔಷಧಿಗಳ ಸುರಕ್ಷತೆಯನ್ನು ಖಚಿತಪಡಿಸುವಲ್ಲಿ ಹಾಗೂ ಪ್ರಾಣಿಗಳಲ್ಲಿ ಉಂಟಾಗುವ ವಿಷಪೂರಿತ ಸಮಸ್ಯೆಗಳ ತಡೆ ಮತ್ತು ನಿರ್ವಹಣೆಯಲ್ಲಿ ಮಹತ್ವದ ಪಾತ್ರವಹಿಸುತ್ತದೆ.ಇದು ಪ್ರಾಣಿಗಳಿಗೆ ನೀಡುವ ಔಷಧಿಗಳ ಗುಣಲಕ್ಷಣಗಳು, ವಿಷಶಾಸ್ತ್ರ (Toxicity) ಮತ್ತು ಅವುಗಳ ಅಡ್ಡಪರಿಣಾಮಗಳ ಬಗ್ಗೆ ಆಳವಾದ ಅಧ್ಯಯನವನ್ನು ಒಳಗೊಂಡಿದೆ. ಕರ್ನಾಟಕದಲ್ಲಿ ಏಗಿಂಈ–ಖಗ ಮೂಲಕ ಈ ಕೋರ್ಸ್ ಲಭ್ಯವಿದ್ದು, ಸಂಶೋಧನೆ ಮತ್ತು ಪ್ರಾಣಿ ಚಿಕಿತ್ಸೆಯಲ್ಲಿ ವೃತ್ತಿಜೀವನಕ್ಕೆ ಉತ್ತಮ ಅವಕಾಶಗಳನ್ನು ಒದಗಿಸುತ್ತದೆ ಕೋರ್ಸ್ ಅವಧಿ: 2 ವರ್ಷಗಳು (4 ಸೆಮಿಸ್ಟರ್‌ಗಳು). ಅರ್ಹತೆವಿಶ್ವವಿದ್ಯಾಲಯದಿಂದ B.V.Sc & A.H. (Bache-lor of Veterinary Science and Anımal Husbandry) ಪದವಿ.ಪ್ರವೇಶ ಪ್ರಕ್ರಿಯೆ: ಪ್ರವೇಶ ಪರೀಕ್ಷೆಗಳು (ICAR AIEEA) ಅಥವಾ ವಿಶ್ವವಿದ್ಯಾಲಯದ ನೇರ ಕೌನ್ಸೆಲಿಂಗ್ (KVAFSU) ಮೂಲಕ. ಅಧ್ಯಯನದ ವಿಷಯಗಳು:ಪಶುವೈದ್ಯಕೀಯ ಫಾರ್ಮಕಾಲಜಿ: ಔಷಧಿಗಳ ವಿಶ್ಲೇಷಣೆ, ಪ್ರಾಣಿಗಳ ಮೇಲೆ ಅವುಗಳ ಪರಿಣಾಮ.ವಿಷಶಾಸ್ತ್ರ (Tox-icology): ವಿಷಕಾರಿ ಪದಾರ್ಥಗಳು, ಪರಿಸರ ಮಾಲಿನ್ಯಕಾರಕಗಳು ಮತ್ತು ಪ್ರಾಣಿಗಳ ಮೇಲೆ ಅವುಗಳ ಪರಿಣಾಮ.ಚಿಕಿತ್ಸಕ (Ther-apeutics): ಕಾಯಿಲೆಗಳನ್ನು ಗುಣಪಡಿಸಲು ಔಷಧಿಗಳ ಬಳಕೆ. ಉದ್ಯೋಗಾವಕಾಶಗಳು: ಪಶುವೈದ್ಯಕೀಯ ಕಾಲೇಜುಗಳಲ್ಲಿ ಪ್ರಾಧ್ಯಾಪಕರು.ಔಷಧಿ ಕಂಪನಿಗಳಲ್ಲಿ ಸಂಶೋಧನಾ ವಿಜ್ಞಾನಿಗಳು.ಸರ್ಕಾರಿ ಮತ್ತು ಖಾಸಗಿ ಪಶು ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರು.ಪಶು ಆಹಾರ (Feed) ಮತ್ತು ಪ್ರಾಣಿ ಆರೋಗ್ಯ ಉತ್ಪನ್ನಗಳ ಉದ್ಯಮದಲ್ಲಿ.

# ಬೆಳಗಾವಿಯಲ್ಲಿ ಸಚಿವರ ಭೇಟಿ – ಕಲ್ಯಾಣ ಕರ್ನಾಟಕ ಮೇಲ್ವಿಚಾರಕರ ಹುದ್ದೆ ಅನ್ಯಾಯ ಕುರಿತು ಮನವಿ

ನೈಜ್ಯ ದೆಸೆ ನ್ಯೂಸ್



ದಿನಾಂಕ 21/02/2026 ರಂದು ಬೆಳಗಾವಿ ನಗರದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆಯಾದ ಲಕ್ಷ್ಮಿ ಹೆಬ್ಬಾಳ್ಕರ್ ಹಾಗೂ ಅವರ ಪುತ್ರರಾದ ಮೃಣಾಲ ಹೆಬ್ಬಾಳ್ಕರ್ ಅವರನ್ನು ಅವರ ಕಾರ್ಯಾಲಯ ಹಾಗೂ ನಿವಾಸದಲ್ಲಿ ಭೇಟಿ ಮಾಡಿ, ಹೈದರಾಬಾದ್ ಕರ್ನಾಟಕ (ಊಏ) ಪ್ರಸ್ತುತ ಕಲ್ಯಾಣ ಕರ್ನಾಟಕ ಭಾಗದ ಅಂಗನವಾಡಿ ಮೇಲ್ವಿಚಾರಕರ ಪದೋನ್ನತಿ ಸಂಬಂಧಿತ ಅನ್ಯಾಯದ ಬಗ್ಗೆ ಸವಿಸ್ತಾರ ಮನವಿ ಸಲ್ಲಿಸಲಾಯಿತು.2004ರಲ್ಲಿ ಹೈದರಾಬಾದ್ ಕರ್ನಾಟಕ ವ್ಯಾಪ್ತಿಯಲ್ಲಿ 235 ಅಂಗನವಾಡಿ ಕಾರ್ಯಕರ್ತರನ್ನು ಮೇಲ್ವಿಚಾರಕರಾಗಿ ಮುಂಬಡ್ತಿ ನೀಡಿ ನೇಮಕ ಮಾಡಲಾಗಿತ್ತು. ನಂತರ ಆಗಾಗ 100 ಮಂದಿಗೆ ಹಿರಿಯ ಮೇಲ್ವಿಚಾರಕರ ಹುದ್ದೆಗೆ ಪದೋನ್ನತಿ ನೀಡಲಾಗಿದೆ.ಆದರೆ ಊಏ ಹೊರತುಪಡಿಸಿ ಉಳಿದ (NHK) ಜಿಲ್ಲೆಗಳಲ್ಲಿ 2100 ಅಂಗನವಾಡಿ ಕಾರ್ಯಕರ್ತೆಯ–ರಿಗೆ ಮೇಲ್ವಿಚಾರಕ ಹುದ್ದೆಗೆ ಪದೋನ್ನತಿ ನೀಡಲಾಗಿದ್ದು, 2004ರಿಂದ ಇಂದಿನವರೆಗೆ 1600 ಮಂದಿಗೆ ಹಿರಿಯ ಮೇಲ್ವಿಚಾರಕರಾಗಿ ಪದೋನ್ನತಿ ನೀಡಲಾಗಿದೆ. ಪ್ರಸ್ತುತ 2026ನೇ ಸಾಲಿನಲ್ಲಿ ಉಳಿದ 500 ಮೇಲ್ವಿಚಾರಕ ಹುದ್ದೆಗಳಲ್ಲಿ 118 ಮಂದಿಗೆ ಹಿರಿಯ ಮೇಲ್ವಿಚಾರಕರಾಗಿ ನೇಮಕ ಮಾಡಲು ಆದೇಶ ನೀಡಲಾಗಿದೆ.ಇದಕ್ಕೆ ವಿರುದ್ಧವಾಗಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಉಳಿದಿರುವ 135 ಮೇಲ್ವಿಚಾರಕ ಹುದ್ದೆಗಳ ಪೈಕಿ ಕೇವಲ 15 ಹುದ್ದೆಗಳನ್ನಷ್ಟೇ ಆದೇಶದಲ್ಲಿ ಸೇ–ರಿಸಲಾಗಿದೆ. ಜೊತೆಗೆ ನಿವೃತ್ತಿ ಹೊಂದಿದವರ ಹಾಗೂ ಮರಣ ಹೊಂದಿದವರ ಹೆಸರುಗಳನ್ನೂ ಆದೇಶದಲ್ಲಿ ಸೇರಿಸಿರುವ ಬಗ್ಗೆ ದಾಖಲೆ ಸಮೇತ ವಿವರ ನೀಡಲಾಯಿತು. ಈ ಅನ್ಯಾಯವನ್ನು ಸರಿಪಡಿಸುವಂತೆ ಮನವಿ ಮಾಡಲಾಗಿದ್ದು, ಸಚಿವರು ತಕ್ಕ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯ ಪ್ರಧಾನ ಕಾರ್ಯದರ್ಶಿ ಶರಣಪ್ಪ ಮರಳಿ ಸುಲ್ತಾನಪುರ, ಕಲ್ಯಾಣ ಕರ್ನಾಟಕ ಮೇಲ್ವಿಚಾರಕರ ಸಂಘದ ಅಧ್ಯಕ್ಷೆ ಶ್ರೀಮತಿ ಅವರಮ್ಮ ಬಸನಗೌಡ ಗುಡಿಜಾವೂರ (ರಾಯಚೂರು), ಶ್ರೀಮತಿ ಲಲಿತಾ (ಡಿ.ಆರ್. ಮಸ್ಕಿ), ತುರ್ವಿಹಾಳದ ಶ್ರೀಮತಿ ಶಾಂತಮ್ಮ, ಮಾನ್ವಿಯ ಶ್ರೀಮತಿ ನಾಗರತ್ನ ಮತ್ತು ಶ್ರೀಮತಿ ನಿರ್ಮಲಾ, ಸಿಂಧನೂರು ತಾಲೂಕಿನ ಶ್ರೀಮತಿ ನೀಲಮ್ಮ ಬೂದಿಹಾಳ, ಕೊಪ್ಪಳ ಜಿಲ್ಲೆಯ ಶ್ರೀಮತಿ ಗಾಯತ್ರಿ ದೇವಾಂಗದ, ಗಂಗಾವತಿ ತಾಲೂಕಿನ ಶ್ರೀಮತಿ ಲಕ್ಷ್ಮೀದೇವಿ ಹಾಗೂ ಶ್ರೀಮತಿ ಶಾಹಿನಾಬಾನು, ಕುಷ್ಟಗಿ ತಾಲೂಕಿನ ಶ್ರೀಮತಿ ಶಕುಂತಲಾ ಪೂಜಾರ ಹಾಗೂ ಶ್ರೀಮತಿ ಸಾವಿತ್ರಿ ಮಕ್ತಾಪುರ, ಯಲಬುರ್ಗಾ ತಾಲೂಕಿನ ಶ್ರೀಮತಿ ಲಲಿತಾ ನಾಯಕ ಹಾಗೂ ಶ್ರೀಮತಿ ಮಂಜುಳಾ ಗುಗ್ಗರಿ ಸೇರಿದಂತೆ ವಿವಿಧ ಜಿಲ್ಲೆಗಳ ಮೇಲ್ವಿಚಾರಕರು ಉಪಸ್ಥಿತರಿದ್ದರು.ಕಲ್ಯಾಣ ಕರ್ನಾಟಕ ಭಾಗದ ಮೇಲ್ವಿಚಾರಕರಿಗೆ ಸಮಾನ ನ್ಯಾಯ ದೊರಕಬೇಕು ಎಂಬುದು ಸಭೆಯ ಪ್ರಮುಖ ಆಶಯವಾಗಿತ್ತು.



# ಅಬ್ಬೆತುಮಕೂರು ಸದ್ಗುರು ಶ್ರೀ ವಿಶ್ವರಾಧ್ಯರ ಜಾತ್ರಾ ಮಹೋತ್ಸವ

## ಸದ್ಗುರು ಆಶೀರ್ವಾದ ಪಡೆದ ಎನ್.ಎಸ್. ಬೋಸರಾಜು




ನೈಜ್ಯ ದೆಸೆ ನ್ಯೂಸ್

ಯಾದಗಿರಿ ಜಿಲ್ಲೆಯ ಅಬ್ಬೆತುಮಕೂರುದಲ್ಲಿರುವ ಅಬ್ಬೆತುಮಕೂರು ಶ್ರೀ ವಿಶ್ವರಾಧ್ಯ ಸುಕ್ಷೇತ್ರದಲ್ಲಿ ಅಣಿಮಾದಿ ಅಷ್ಟಸಿದ್ಧಿ ಪುರುಷ ಭಾವೈಕ್ಯತೆಯ ಭಗವಂತ ಸದ್ಗುರು ಶ್ರೀ ವಿಶ್ವರಾಧ್ಯರ ಜಾತ್ರಾ ಮಹೋತ್ಸವ ಹಾಗೂ ಭವ್ಯ ರಥೋತ್ಸವವು ಅತ್ಯಂತ ವಿಜೃಂಭಣೆಯಿಂದ ನೆರವೇ–ರಿತು.ಈ ಮಹೋತ್ಸವದ ಅಂಗವಾಗಿ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವರಾದ ಎನ್.ಎಸ್. ಬೋಸರಾಜು ಅವರು ಶ್ರೀ ಕ್ಷೇತ್ರಕ್ಕೆ ಆಗಮಿಸಿ ಸದ್ಗುರು ಶ್ರೀ ವಿಶ್ವರಾಧ್ಯರ ದಿವ್ಯ ಸನ್ನಿಧಿಯಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ರಾಜ್ಯದ ಜನತೆಗೆ ಸುಖ–ಶಾಂತಿ, ಸಮೃದ್ಧಿ ಹಾಗೂ ಉತ್ತಮ ಮಳೆಯಾಗಲೆಂದು ಪ್ರಾರ್ಥನೆ ಸಲ್ಲಿಸಿದರು. ಜಾತ್ರಾ ಮಹೋತ್ಸವದ ಅಂಗವಾಗಿ ಧಾರ್ಮಿಕ ಕಾರ್ಯಕ್ರಮಗಳು, ವೇದಮಂತ್ರಗಳ ಘೋಷಣೆ, ಭಜನೆ–ಕೀರ್ತನೆಗಳು ಹಾಗೂ ರಥೋತ್ಸವವು ಭಕ್ತರ ಗಮನ ಸೆಳೆಯಿತು. ಸಾವಿರಾರು ಭಕ್ತರು ಭಾಗವಹಿಸಿ ಸದ್ಗುರುಗಳ ಕೃಪೆಗೆ ಪಾತ್ರರಾದರು. ರಥೋತ್ಸವದ ವೇಳೆ ಭಕ್ತರು ಜಯಘೋಷಗಳೊಂದಿಗೆ ಭಾಗವಹಿಸಿದ್ದು, ಕ್ಷೇತ್ರದ ವಾತಾವರಣ ಭಕ್ತಿಭಾವದಿಂದ ಕೂಡಿತ್ತು.ಪೂಜೆಯ ನಂತರ ಸದ್ಗುರು ಶ್ರೀಗಳು ಸಚಿವರಿಗೆ ಶಾಲು ಹೊದಿಸಿ ಸನ್ಮಾನಿಸಿ, ಜಾತ್ರಾ ಮಹೋತ್ಸವದ ಸ್ಮರಣಿಕೆ ನೀಡಿ ಆಶೀರ್ವಾದಿಸಿದರು. ಸಚಿವರು ಕ್ಷೇತ್ರದ ಅಭಿವೃದ್ಧಿಗೆ ತಮ್ಮ ಸಹಕಾರ ಮುಂದುವ–ರಿಸುವುದಾಗಿ ತಿಳಿಸಿದರು.ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ನರಸನಗೌಡ, ಜಿ. ಶಿವಮೂರ್ತಿ, ಅಮರೇಗೌಡ ಹಂಚಿನಾಳ್, ಈಶ್ವರ ಮಡಿವಾಳ, ಸಣ್ಣ ನರಸ ರೆಡ್ಡಿ, ಗೋವಿಂದ ಸೇರಿದಂತೆ ಹಲವರು ಹಾಗೂ ವಿವಿಧ ಭಾಗಗಳಿಂದ ಆಗಮಿಸಿದ ಭಕ್ತರು ಉಪಸ್ಥಿತರಿದ್ದು, ಕಾರ್ಯಕ್ರಮ ಭಕ್ತಿಪೂರ್ಣ ಹಾಗೂ ಶಾಂತ ವಾತಾವರಣದಲ್ಲಿ ಯಶಸ್ವಿಯಾಗಿ ನೆರವೇರಿತು.



# ವಾಲ್ಮೀಕಿ ಶ್ರೀಗಳು ಆರೋಗ್ಯವಾಗಿದ್ದಾರೆ , ಸ್ವಾಮೀ–ಜಿಗಳು ಆದಷ್ಟು ಬೇಗನೆ ಚೇತರಿಸಿಕೊಳ್ಳಲಿದ್ದಾರೆ: ಸಂಸದ ಜಿ ಕುಮಾರ್ ನಾಯಕ

ನೈಜ್ಯ ದೆಸೆ ನ್ಯೂಸ್



ಹೈದರಾಬಾದ್ನಲ್ಲಿ ಚಿಕಿತ್ಸೆ ಪಡೆಯುತ್ತಿರುವ ರಾಜನಹಳ್ಳಿಯ ವಾಲ್ಮೀಕಿ ಗುರುಪೀಠದ ಪೀಠಾಧಿಪತಿಗಳಾದ ಡಾ. ವಾಲ್ಮೀಕಿ ಪ್ರಸನ್ನಾನಂದ ಸ್ವಾಮೀಜಿ ಅವರ ಆರೋಗ್ಯವನ್ನು ರಾಯಚೂರು–ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದ ಜಿ ಕುಮಾರ ನಾಯಕ ಅವರು ಭೇಟಿ ನೀಡಿ ವಿಚಾರಿಸಿದರು. ಹೈದರಾಬಾದ್‌ನ ಅಪೋಲೋ ಆಸ್ಪತ್ರೆಗೆ ತೆರಳಿ ಶ್ರೀಗಳ ಆರೋಗ್ಯ ಸ್ಥಿತಿ ಕು–ರಿತು ವೈದ್ಯರೊಂದಿಗೆ ಸಮಾಲೋಚನೆ ನಡೆಸಿದ ಸಂಸದರು, ಶ್ರೀಗಳಿಗೆ ಲಘು ಶಸ್ತ್ರಚಿಕಿತ್ಸೆ ನೆರವೇರಿಸಿ ಸ್ಟಂಟ್ ಅಳವಡಿಸಲಾಗಿದೆ ಎಂದು ತಿಳಿಸಿದರು. ಪ್ರಸ್ತುತ ಶ್ರೀಗಳ ಆರೋಗ್ಯ ಸ್ಥಿರವಾಗಿದ್ದು, ತಜ್ಞ ವೈದ್ಯರ ತಂಡವು ನಿತ್ಯ ಪರಿಶೀಲನೆ ನಡೆಸುತ್ತಿದೆ. ಚಿಕಿತ್ಸೆಗೂ ಶ್ರೀಗಳು ಉತ್ತಮವಾಗಿ ಸ್ಪಂದಿಸುತ್ತಿದ್ದು, ಶೀಘ್ರದಲ್ಲೇ ಗುಣಮುಖರಾಗಲಿದ್ದಾರೆ ಎಂದು ವೈದ್ಯರು ಮಾಹಿತಿ ನೀಡಿದ್ದಾರೆ.ಈ ಕು–ರಿತು ಮಾತನಾಡಿದ ಸಂಸದರು, "ಭಕ್ತರು ಯಾವುದೇ ಆತಂಕ ಪಡುವ ಅಗತ್ಯವಿಲ್ಲ. ವೈದ್ಯರ ಸಲಹೆಯಂತೆ ಶ್ರೀಗಳು ವಿಶ್ರಾಂತಿ ಪಡೆಯುತ್ತಿದ್ದಾರೆ. ಆದಷ್ಟು ಬೇಗನೆ ಚೇತರಿಸಿಕೊಂಡು ಭಕ್ತರ ಮಧ್ಯೆ ಮರಳಲಿದ್ದಾರೆ" ಎಂದು ವಿಶ್ವಾಸ ವ್ಯಕ್ತಪಡಿಸಿದರು.ಶ್ರೀಗಳ ಆರೋಗ್ಯ ಕ್ಷೇಮಕ್ಕಾಗಿ ರಾಜ್ಯದ ವಿವಿಧ ಭಾಗಗಳಲ್ಲಿ ಭಕ್ತರು ವಿಶೇಷ ಪೂಜೆ, ಪ್ರಾರ್ಥನೆಗಳನ್ನು ಸಲ್ಲಿಸುತ್ತಿದ್ದಾರೆ. ವೈದ್ಯರ ಸೂಚನೆಯಂತೆ ಪೂರ್ಣ ಚಿಕಿತ್ಸೆ ಮುಗಿಯುವವರೆಗೆ ಭಕ್ತಾದಿಗಳು, ಸಮಾಜದ ಮುಖಂಡರು ಹಾಗೂ ಗಣ್ಯರು ಸಹಕರಿಸಬೇಕು ಎಂದು ಮನವಿ ಮಾಡಲಾಗಿದೆ.

# ದುಡ್ಡುಪುಡಿ ಟ್ಯಾಲೆಂಟ್ ಸರ್ಚ್ ಪರೀಕ್ಷೆ ಯಶಸ್ವಿ

ನೈಜ್ಯ ದೆಸೆ ನ್ಯೂಸ್



ಸಿಂಧನೂರು ಫೆ 22 : ದುಡ್ಡುಪೂಡಿ ಭದ್ರಾವತಿ ಮೆಮೋರಿಯಲ್ ಮೆರಿಟ್ ಸ್ಕಾಲರ್‌ಶಿಪ್ 2025–26 ಅಂಗವಾಗಿ ಆಯೋಜಿಸಲಾದ ದುಡ್ಡುಪೂಡಿ ಟ್ಯಾಲೆಂಟ್ ಸರ್ಚ್ ಪರೀಕ್ಷೆ ಇಂದು ಯಶಸ್ವಿಯಾಗಿ ನಡೆಯಿತು. ಈ ಪರೀಕ್ಷೆಯನ್ನು 6ನೇ ತರಗತಿಯಿಂದ 9ನೇ ತರಗತಿಯ ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾಗಿತ್ತು. ಪರೀಕ್ಷೆ ಇಂದು ಬೆಳಿಗ್ಗೆ 9.30 ರಿಂದ 11.00 ಗಂಟೆಯವರೆಗೆ ಶಾಂತಿಯುತವಾಗಿ ಮತ್ತು ನಿಯಮಾನುಸಾರವಾಗಿ ನಡೆಯಿತು. ಪರೀಕ್ಷೆ ಪ್ರಸ್ತುತ ತರಗತಿ ಪಠ್ಯಕ್ರಮ ಆಧಾ–ರಿತವಾಗಿದ್ದು, ವಿದ್ಯಾರ್ಥಿಗಳ ಪ್ರತಿಭೆಯನ್ನು ಗುರುತಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಶಾಲಾ ಆಡಳಿತ ಮಂಡಳಿ ಹಾಗೂ ಶಿಕ್ಷಕರ ಸಹಕಾರದೊಂದಿಗೆ ಪರೀಕ್ಷಾ ಪ್ರಕ್ರಿಯೆ ಸುವ್ಯವಸ್ಥಿತವಾಗಿ ನಡೆಯಿತು. ಈ ಪರೀಕ್ಷೆಯ ಮೂಲಕ ಒಟ್ಟು ರೂ. 50,00,000/– ವರೆಗೆ ವಿದ್ಯಾರ್ಥಿವೇತನವನ್ನು ನೀಡಲಾಗುತ್ತದೆ. ವಿದ್ಯಾರ್ಥಿಗಳ ಸಾಧನೆಯ ಆಧಾರದ ಮೇಲೆ ಟ್ಯೂಷನ್ ಶುಲ್ಕದಲ್ಲಿ ವಿವಿಧ ಶೇಕಡಾವಾರು ರಿಯಾಯಿತಿ ನೀಡಲಾಗುತ್ತದೆ.ವಿದ್ಯಾರ್ಥಿವೇತನ ವಿವರಗಳು:99% – 100% : 50% ಟ್ಯೂಷನ್ ಶುಲ್ಕ ಮನ್ನಾ 95% – 98.99% : 20% ಟ್ಯೂಷನ್ ಶುಲ್ಕ ಮನ್ನಾ 90% – 94.99% : 15% ಟ್ಯೂಷನ್ ಶುಲ್ಕ ಮನ್ನಾ 85% – 89.99% : 10% ಟ್ಯೂಷನ್ ಶುಲ್ಕ ಮನ್ನಾ ಪರೀಕ್ಷೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ಪರೀಕ್ಷೆ ಬರೆದಿದ್ದು, ಪೋಷಕರು ಮತ್ತು ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು. ವಿದ್ಯಾರ್ಥಿಗಳ ಪ್ರತಿಭೆಯನ್ನು ಉತ್ತೇಜಿಸಲು ಮತ್ತು ಉತ್ತಮ ಶಿಕ್ಷಣಾವಕಾಶಗಳನ್ನು ಒದಗಿಸಲು ಈ ವಿದ್ಯಾರ್ಥಿವೇತನ ಯೋಜನೆ ಸಹಕಾರಿಯಾಗಲಿದೆ ಎಂದು ಶಾಲಾ ಆಡಳಿತ ಮಂಡಳಿ ತಿಳಿಸಿದೆ.ಪರೀಕ್ಷಾ ಫಲಿತಾಂಶವನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದು ಎಂದು ಶಾಲಾ ಮೂಲಗಳು ತಿಳಿಸಿವೆ.

ವರದಿಗಾರರು : ಲಾಜರ್ ಸಿರಿಲ್

# ಕಸಾಪ ವತಿಯಿಂದ ಬಸವನಗೌಡ ಬಾದರ್ಲಿ ಹುಟ್ಟು ಹಬ್ಬ ಆಚರಣೆ



ನೈಜ್ಯ ದೆಸೆ ನ್ಯೂಸ್

ಸಿಂಧನೂರು : ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಮಾನ್ಯ ಶ್ರೀ ಬಸವನಗೌಡ ಬಾದರ್ಲಿ (ವಿಧಾನ ಪರಿಷತ್ ಸದಸ್ಯರು, ) ಅವರ ಜನ್ಮದಿನದ ಅಂಗವಾಗಿ ಭಾವಪೂರ್ಣವಾಗಿ ಶುಭಾಶಯ ಕೋರಿಸಿ ಸನ್ಮಾನಿಸಲಾಯಿತು. ಕಾರ್ಯಕ್ರಮದ ಆರಂಭದಲ್ಲಿ ಅವರಿಗೆ ಶಾಲು ಹೊದಿಸಿ, ಹಾರ ಹಾಕಿ, ಸ್ಮರಣಿಕೆ ನೀಡಿ ಗೌರವಿಸಲಾಯಿತು. ಉಪಸ್ಥಿತರಿದ್ದ ಮುಖಂಡರು ಮತ್ತು ಸದಸ್ಯರು ಅವರ ಜನಸೇವಾ ಮನೋಭಾವ, ಸರಳತೆ ಹಾಗೂ ಅಭಿವೃದ್ಧಿ ಕಾರ್ಯಗಳ ಬಗ್ಗೆ ಕೊಂಡಾಡಿದರು. ಮಾತನಾಡಿದ ಗಣ್ಯರು, ಬಸವನಗೌಡ ಬಾದರ್ಲಿ ಅವರು ಸದಾ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಜನಪ್ರತಿನಿಧಿಯಾಗಿದ್ದು, ಶಿಕ್ಷಣ, ಕೃಷಿ, ಸಾಮಾಜಿ–ಕ ನ್ಯಾಯ ಹಾಗೂ ಕನ್ನಡ ಭಾಷೆಯ ಉತ್ತೇಜನಕ್ಕೆ ನಿರಂತರವಾಗಿ ಶ್ರಮಿಸುತ್ತಿರುವುದು ಪ್ರಶಂಸನೀಯವೆಂದು ಹೇಳಿದರು.ಸಿಂಧನೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಹೆಚ್.ಎಫ್. ಮಸ್ಕಿ ಅವರು, "ಕನ್ನಡ ಸಾಹಿತ್ಯ ಮತ್ತು ಸಂಸ್ಕೃತಿಯನ್ನು ಬೆಳೆಸುವಲ್ಲಿ ಜನಪ್ರತಿನಿಧಿಗಳ ಸಹಕಾರ ಅತ್ಯಂತ ಅಗತ್ಯ. ಬಸವನಗೌಡ ಬಾದರ್ಲಿ ಅವರಂತಹ ನಾಯಕ–ರಿಗೆ ಸನ್ಮಾನ ಸಲ್ಲಿಸುವುದು ನಮ್ಮ ಗೌರವ" ಎಂದು ಅಭಿಪ್ರಾಯಪಟ್ಟರು.ಈ ಸಂದರ್ಭದಲ್ಲಿ ಪರಿಷತ್ತಿನ ಪದಾಧಿಕಾರಿಗಳು, ಸದಸ್ಯರು ಹಾಗೂ ಹಲವಾರು ಸಾಹಿತ್ಯಾಸಕ್ತರು ಉಪಸ್ಥಿತ–ರಿದ್ದು, ಜನ್ಮದಿನದ ಶುಭಾಶಯಗಳನ್ನು ತಿಳಿಸಿ, ಅವರ ಆಯುಷ್ಯ, ಆರೋಗ್ಯ ಹಾಗೂ ಇನ್ನಷ್ಟು ಸೇವಾ ಕಾರ್ಯಗಳಿಗೆ ಹಾರೈಸಿದರು. ಕಾರ್ಯಕ್ರಮವು ಹರ್ಷೋಲ್ಲಾಸ ಮತ್ತು ಸೌಹಾರ್ದದ ವಾತಾವರಣದಲ್ಲಿ ಯಶಸ್ವಿಯಾಗಿ ನೆರವೇರಿತು

# ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿ ದರ್ಶನ ಪಡೆದ ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ



ನೈಜ್ಯ ದೆಸೆ ನ್ಯೂಸ್

ರಾಯಚೂರು :ಮಂತ್ರಾಲಯದಲ್ಲಿರುವ ಪವಿತ್ರ ಕ್ಷೇತ್ರ ಶ್ರೀ ರಾಘವೇಂದ್ರ ಸ್ವಾಮಿ ದೇವಸ್ಥಾನಕ್ಕೆ ಎಚ್.ಡಿ. ಕುಮಾರಸ್ವಾಮಿ ಅವರು ಭೇಟಿ ನೀಡಿ ರಾಯರ ದಿವ್ಯ ಬೃಂದಾವನದ ಮುಂದೆ ವಿಶೇಷ ಪೂಜೆ ಸಲ್ಲಿಸಿದರು. ಅವರೊಂದಿಗೆ (ಏಔಈ) ರಾಜ್ಯಾಧ್ಯಕ್ಷರು ಹಾಗೂ ಮಾಜಿ ಸಚಿವರಾದ ವೆಂಕಟ–ರಾವ್ ನಾಡಗೌಡ , ದೇವದುರ್ಗದ ಶಾಸಕರಾದ ಕರಿಯಮ್ಮ ಜಿ , ಮಾನವಿ ಮಾಜಿ ಶಾಸಕರಾದ ರಾಜ ವೆಂಕಟಪ್ಪ ನಾಯಕ್ ಉಪಸ್ಥಿತ–ರಿದ್ದರು.ದೇವಸ್ಥಾನಕ್ಕೆ ಆಗಮಿಸಿದ ಸಂದರ್ಭದಲ್ಲಿ ಅರ್ಚಕರು ಸಂಪ್ರದಾಯಬದ್ಧವಾಗಿ ಸ್ವಾಗತಿಸಿದರು. ಬಳಿಕ ರಾಯರ ಸನ್ನಿಧಿಯಲ್ಲಿ ವಿಶೇಷ ಅರ್ಚನೆ, ಪಾದುಕಾ ಪೂಜೆ ಹಾಗೂ ಮಂಗಳಾರತಿ ನೆರವೇರಿಸಲಾಯಿತು. ರಾಜ್ಯದಲ್ಲಿ ಉತ್ತಮ ಮಳೆಯಾಗಲಿ, ರೈತರ ಬೆಳೆಗೆ ಸಮೃದ್ಧಿ ಬರಲಿ, ಯುವಕರಿಗೆ ಉದ್ಯೋಗಾವಕಾಶಗಳು ಹೆಚ್ಚಲಿ ಮತ್ತು ರಾಜ್ಯದ ಜನತೆ ಶಾಂತಿ–ಸೌಹಾರ್ದದಿಂದ ಬದುಕಲಿ ಎಂದು ಪ್ರಾರ್ಥನೆ ಸಲ್ಲಿಸಲಾಯಿತು.ಪೂಜಾ ವಿಧಿವಿಧಾನಗಳ ನಂತರ ದೇವಸ್ಥಾನದ ಪರಿವಾರದಿಂದ ತೀರ್ಥ–ಪ್ರಸಾದ ಸ್ವೀಕರಿಸಿ, ದೇವಾಲಯದ ಇತಿಹಾಸ ಹಾಗೂ ಧಾರ್ಮಿಕ ಪರಂಪರೆ ಕು–ರಿತು ಮಾಹಿತಿ ಪಡೆದುಕೊಂಡರು. ಈ ವೇಳೆ ಭಕ್ತರು ಹಾಗೂ ಕಾರ್ಯಕರ್ತರು ನಾಯಕರನ್ನು ಭೇಟಿ ಮಾಡಿ ಆಶೀರ್ವಾದ ಪಡೆದರು. ಕಾರ್ಯಕ್ರಮದಲ್ಲಿ ವಿವಿಧ ಗಣ್ಯರು, ಜೆಡಿಎಸ್ ಸ್ಥಳೀಯ ಮುಖಂಡರು, ಪಕ್ಷದ ಪದಾಧಿಕಾರಿಗಳು ಹಾಗೂ ಅನೇಕ ಕಾರ್ಯಕರ್ತರು ಭಾಗವಹಿಸಿದ್ದು, ಭಕ್ತಿಭಾವಪೂರ್ಣ ವಾತಾವರಣ ನಿರ್ಮಾಣವಾಗಿತ್ತು.

